# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 195 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 22–02–2025 ಶನಿವಾರ | ಪುಟ: 4 | ಬೆಲೆ : ರೂ.2–00

Volume - 02 Issue - 195 | RNI No: KARKAN/2023/88462 | KA/SK/CTA-874/2024-2026 | Chitradurga | Date: 22-02-2025 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಸರ್ಕಾರ ಬಜೆಟ್‌ನಲ್ಲಿ ಸರ್ಕಾರಿ ಶಾಲೆಗಳಿಗೆ ಹೆಚ್ಚಿನ ಅನುದಾನ ಮೀಸಲಿಡುವಂತೆ ಆಗ್ರಹ 2

ಸಾಲ ಕಟ್ಟಿಸಲು ಬಲವಂತದ ಕ್ರಮಕ್ಕೆ ಕಾನೂನಿನಲ್ಲಿ ಅವಕಾಶವಿಲ್ಲ: ಡಿಸಿ 3

ಹೆಗ್ಗೆರೆ ಈಶ್ವರಗೆ ವಿಶೇಷ ಪೂಜೆ ಸಲ್ಲಿಸಿದ ನಾಗಸಾಧು 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಫೆ.22ರಂದು ಅರಸನಘಟ್ಟ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ವಿದ್ಯುತ್ ಉಪಕೇಂದ್ರ ಉದ್ಘಾಟನೆ

» ಚಿತ್ರದುರ್ಗ

ಇಂಧನ ಇಲಾಖೆ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ವತಿಯಿಂದ ಹೊಳಲ್ಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹೊಳಲ್ಕೆರೆ ತಾಲ್ಲೂಕು ಅರಸನಘಟ್ಟ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ 66/11 ಕೆ.ವಿ ವಿದ್ಯುತ್ ಉಪಕೇಂದ್ರ ಉದ್ಘಾಟನಾ ಕಾರ್ಯಕ್ರಮ ಇದೇ ಫೆ.22ರಂದು ಬೆಳಿಗ್ಗೆ 11ಕ್ಕೆ ಹೊಳಲ್ಕೆರೆ ತಾಲ್ಲೂಕು ಅರಸನಘಟ್ಟ 66/11 ಕೆ.ವಿ ವಿದ್ಯುತ್ ಉಪಕೇಂದ್ರ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂಜಿಲ್ಲಾಉಸ್ತುವಾರಿಸಚಿವರಾದಡಿ.ಸುಧಾಕರ್ ಉದ್ಘಾಟನೆ ನೆರವೇರಿಸುವರು. ಇಂಧನ ಸಚಿವ ಕೆ.ಜೆ. ಜಾರ್ಜ್ ಘನ ಉಪಸ್ಥಿತಿವಹಿಸುವರು. ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ ಕಾರಜೋಳ, ಹೊಸದುರ್ಗ ಶಾಸಕರು ಹಾಗೂ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ಅಧ್ಯಕ್ಷ ಬಿ.ಜಿ.ಗೋವಿಂದಪ್ಪ, ಚಳ್ಳಕೆರೆ ಶಾಸಕ ಹಾಗೂ ರಾಜ್ಯ ಸರ್ಕಾರಿ ಕೈಗಾರಿಕೆಗಳ ಅಭಿವೃದ್ಧಿ ನಿಗಮ ಅಧ್ಯಕ್ಷ ಟಿ.ರಘುಮೂರ್ತಿ, ಮೊಳಕಾಲ್ಮುರು ಶಾಸಕ ಎನ್.ವೈ.ಗೋಪಾಲಕೃಷ್ಣ, ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ.ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್ ಭಾಗವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಆದಿಜಾಂಬವ ಅಭಿವೃದ್ಧಿ ನಿಗಮ ಮಂಡಳಿ ಅಧ್ಯಕ್ಷ ಜಿ.ಎಸ್. ಮಂಜುನಾಥ ಭಾಗವಹಿಸುವರು. ವಿಶೇಷ ಆಹ್ವಾನಿತರಾಗಿ ಇಂಧನ ಇಲಾಖೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಮ್ಲಾನ್ ಆದಿತ್ಯ ಬಿಸ್ವಾಸ್, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ವ್ಯವಸ್ಥಾಪಕ ನಿರ್ದೇಶಕ ಪಂಕಜ್ ಕುಮಾರ್ ಪಾಂಡೆ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ಅಧೀಕ್ಷಕ ರಂಜಿತ್ ಕುಮಾರ್ ಬಂಡಾರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿರ್ದೇಶಕ (ಕಾರ್ಯಾಚರಣೆ) ಗಿರಿಧರ್ ಕುಲಕರ್ಣಿ, ಆಡನೂರು ಗ್ರಾ. ಪಂ ಅಧ್ಯಕ್ಷೆ ಸತ್ಯಭಾಮ ಮಂಜುನಾಥ್, ಉಪಾಧ್ಯಕ್ಷೆ ಮಂಜುಳ ಅಜ್ಜಪ್ಪ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ಕಾರ್ಯಾಚರಣೆ ಮುಖ್ಯ ಇಂಜಿನಿಯರ್ ಬಿ.ಎನ್.ಸತ್ಯನಾರಾಯಣ, ಬೆಸ್ಕಾಂ ಮುಖ್ಯ ಇಂಜಿನಿಯರ್ ಎಂ.ರೋಮರಾಜ್, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ದಾವಣಗೆರೆ ಅಧೀಕ್ಷಕ ಇಂಜಿನಿಯರ್ ಜಿ.ಎಂ.ರೇವಣಸಿದ್ದಪ್ಪ, ಚಿತ್ರದುರ್ಗ ಕಾರ್ಯನಿರ್ವಾಹಕ ಇಂಜಿನಿಯರ್ ಬಿ.ಮಲ್ಲಿಕಾರ್ಜುನ ಸ್ವಾಮಿ ಭಾಗವಹಿಸುವರು.

### ಫೆ.24 ಮತ್ತು 25ರಂದು ಲೋಕಾಯುಕ್ತ ಅಧಿಕಾರಿಗಳ ಪ್ರವಾಸ

» ಚಿತ್ರದುರ್ಗ

ಕರ್ನಾಟಕ ಲೋಕಾಯುಕ್ತ ಚಿತ್ರದುರ್ಗ ವಿಭಾಗದ ಅಧಿಕಾರಿಗಳು ಜಿಲ್ಲೆಯ ಎಲ್ಲ ತಾಲ್ಲೂಕುಗಳಿಗೆ ಭೇಟಿ ನೀಡಿಸಾರ್ವಜನಿಕರಿಂದದೂರುಅಹವಾಲುಗಳನ್ನು ಸ್ವೀಕರಿಸುವ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಲೋಕಾಯುಕ್ತ ಪೊಲೀಸ್ ನಿರೀಕ್ಷಕರು–1 ಫೆ.24 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ ಮೊಳಕಾಲ್ಮೂರು ಪಟ್ಟನ ಪಂಚಾಯಿತಿ ಕಚೇರಿಯಲ್ಲಿ ಹಾಗೂ ಅದೇ ದಿನ ಮಧ್ಯಾಹ್ನ 2.30 ರಿಂದ ಸಂಜೆ 05.30 ರವರೆಗೆ ಚಳ್ಳಕೆರೆ ನಗರಸಭೆ ಕಚೇರಿಯಲ್ಲಿ ಉಪಸ್ಥಿತರಿದ್ದು, ಸಾರ್ವಜನಿಕರಿಂದ ದೂರು, ಅಹವಾಲುಗಳನ್ನು ನಿಗದಿತ ಅರ್ಜಿ ನಮೂನೆಯಲ್ಲಿ ಸ್ವೀಕರಿಸುವರು.ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ಫೆ.25ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ ಹೊಸದುರ್ಗ ಪುರಸಭೆ, ಮಧ್ಯಾಹ್ನ 2.30 ರಿಂದ ಸಂಜೆ 05.30 ರವರೆಗೆ ಹೊಳಲ್ಕೆರೆ ಪುರಸಭೆ ಕಚೇರಿಯಲ್ಲಿ ಉಪಸ್ಥಿತರಿರುವರು. ಪೊಲೀಸ್ ನಿರೀಕ್ಷಕರು–2 ಅದೇ ದಿನ ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ ಚಿತ್ರದುರ್ಗ ನಗರಸಭೆ ಕಚೇರಿಯಲ್ಲಿ ಉಪಸ್ಥಿತರಿರುವರು. ಪೊಲೀಸ್ ನಿರೀಕ್ಷಕರು–3 ಅದೇ ದಿನ ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1.30ರವರೆಗೆ ಹಿರಿಯೂರು ನಗರಸಭೆಯಲ್ಲಿ ಹಾಜರಿದ್ದು, ಸಾರ್ವಜನಿಕರಿಂದ ದೂರು, ಅಹವಾಲುಗಳನ್ನು ಸ್ವೀಕರಿಸುವರು.

### ಸಾಮಾಜಿಕ ನ್ಯಾಯ ದಿನಾಚರಣೆಯಲ್ಲಿ ಜಿಲ್ಲಾ ನ್ಯಾಯಾಧೀಶ ರೋಣ ವಾಸುದೇವ್

# ಸಂವಿಧಾನದಿಂದ ಸಾಮಾಜಿಕ ನ್ಯಾಯ, ಗೌರವಯುತ ಜೀವನ ಸಾಧ್ಯವಾಗಿದೆ

» ಚಿತ್ರದುರ್ಗ

ಭಾರತ ಸಂವಿಧಾನದಿಂದ ದೇಶದ ಜನರಿಗೆ ಸಾಮಾಜಿಕ ನ್ಯಾಯ ಹಾಗೂ ಗೌರವಯುತ ಜೀವನ ನಡೆಸಲು ಸಾಧ್ಯವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ರೋಣ ವಾಸುದೇವ್ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ವಕೀಲರ ಸಂಘ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ವಿಶ್ವ ಸಾಮಾಜಿಕ ನ್ಯಾಯ ದಿನಾಚರಣೆ ಅಂಗವಾಗಿ ಸಾಮಾಜಿಕ ನ್ಯಾಯದ ಬಗ್ಗೆ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಭಾರತ ಸಂವಿಧಾನದ ಪೀಠಿಕೆಯಲ್ಲಿಯೇ "ಸಾಮಾಜಿಕ ನ್ಯಾಯದ" ಕುರಿತು ಎರಡು ಬಾರಿ ವಿಷಯ ಪ್ರಸ್ತಾಪಿಸಲಾಗಿದೆ. ಸರ್ವೋಚ್ಚ ನ್ಯಾಯಾಲಯ ಸಂವಿಧಾನ ಪೀಠಿಕೆಯನ್ನು ಸಂವಿಧಾನದ ಕನ್ನಡಿ ಎಂದು ಅಭಿಪ್ರಾಯಪಟ್ಟಿದೆ ಎಂದು ತಿಳಿಸಿದ ಅವರು, ಸಾಮಾಜಿಕ ನ್ಯಾಯ ಎಲ್ಲರಿಗೂ ಸಿಗಬೇಕು ಎಂಬ ಉದ್ದೇಶದಿಂದ ವಿಶ್ವಸಂಸ್ಥೆ ಪ್ರತಿ ವರ್ಷ ಫೆ.20 ರಂದು ವಿಶ್ವ ಸಾಮಾಜಿಕ ನ್ಯಾಯ ದಿನವನ್ನು ವಿಶ್ವದಾದ್ಯಂತ ಆಚರಿಸಲಾಗುತ್ತಿದೆ ಎಂದರು.

ಹೆಚ್ಚಿನ ಸಂಖ್ಯೆಯ ಉದ್ಯೋಗ ಸೃಜನೆ, ಸಮಾಜದಲ್ಲಿ ಕೆಳಸ್ತರದ ವ್ಯಕ್ತಿಗಳು ಸಹ ಗೌರವಯುತವಾಗಿ ಬದುಕು ನಡೆಸುವ ವಾತಾವರಣ ಸೃಷ್ಠಿ ಮಾಡುವುದು ಸಹ ಸಾಮಾಜಿಕ ನ್ಯಾಯದ ಪರಿಕಲ್ಪನೆಯಡಿ ಸೇರಿದೆ. ಸಾಮಾಜಿಕ ನ್ಯಾಯ ಮಾತ್ರವಲ್ಲದೇ ಇದರ ಜತೆಗೆ ಆರ್ಥಿಕ ನ್ಯಾಯವೂ ಅಗತ್ಯವಾಗಿ ಬೇಕಾಗಿದೆ. ಸಾಮಾಜಿಕ ನ್ಯಾಯ ಎತ್ತಿ ಹಿಡಿಯುವ ಉದ್ದೇಶಕ್ಕಾಗಿ ಸರ್ಕಾರಗಳು ಭೂ ಸುಧಾರಣೆ ಕಾಯ್ದೆ ಸೇರಿದಂತೆ ಅನೇಕ ಕಾನೂನುಗಳನ್ನು ಜಾರಿಗೊಳಿಸಿದೆ ಎಂದು ಹೇಳಿದರು.

ಹಿರಿಯಸಿವಿಲ್‌ನ್ಯಾಯಾಧೀಶರುಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಮಾತನಾಡಿ, 19ನೇ ಶತಮಾನದ ಕೈಗಾರಿಕಾ ಕ್ರಾಂತಿಯ ಸಂದರ್ಭದಲ್ಲಿ ಸಾಮಾಜಿಕ ನ್ಯಾಯದ ಪರಿಕಲ್ಪನೆ ಉಗಮವಾಯಿತು ಎಂದು ತಿಳಿಸಿದ ಅವರು, ಮಹಿಳೆಯರಿಗೂ ಪುರುಷರಿಗೆ ಸರಿಸಮಾನವಾಗಿ ನ್ಯಾಯಸಮ್ಮತವಾದ ಅವಕಾಶ ದೊರೆಯಬೇಕು. ಈ ನಿಟ್ಟಿನಲ್ಲಿ ಸರ್ವರಿಗೂ ಸಮಪಾಲು ಸಮಬಾಳು ಎಂಬ ಪರಿಕಲ್ಪನೆಯಲ್ಲಿ ಸಂವಿಧಾನ ರಚನೆಯಾಗಿದೆ. ಹಾಗೆಯೇ ಆರ್ಥಿಕವಾಗಿ ಹಿಂದುಳಿದವರು ಮತ್ತು ಮುಂದುವರೆದವರು ಎಂಬ ಭೇದಭಾವಕ್ಕೆ ಅವಕಾಶ ಇಲ್ಲದಂತೆ ನೋಡಿಕೊಳ್ಳುವ ಉದ್ದೇಶದಿಂದ ಸಾಮಾಜಿಕ ನ್ಯಾಯ ಅಸ್ತಿತ್ವದಲ್ಲಿದೆ ಎಂದು ಹೇಳಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್ ಮಾತನಾಡಿ, ಬಡವ, ಶ್ರೀಮಂತ ಎಂಬ ತಾರತಮ್ಯ ತೋರದೇ ಎಲ್ಲರಿಗೂ ಸಮಾನ ಅವಕಾಶ ಕಲ್ಪಿಸುವುದೇ ಸಾಮಾಜಿಕ ನ್ಯಾಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ದಿವಾಕರ್ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

## ಹಿಂದೆ ಹಸು ಇದ್ದ ಮನೆಗೆ ವಾಸ್ತು ಬೇಕಾಗಿರಲಿಲ್ಲ

» ಚಿತ್ರದುರ್ಗ

ಹಸುವನ್ನು ಕರೆಯುವಾಗ ಕರು ಹಾಲು ಕುಡಿಯುತ್ತಿರುವಾಗಲೇ ಹಾಲು ಕರೆದರೆ ಆ ತಾಯಿ ಬೇಕಾದಷ್ಟು ಹಾಲು ಕೊಡುತ್ತಾಳೆ. ಕರು ಕಟ್ಟಿಹಾಕಿ ಹಾಲು ಕರೆದರೆ ನೊಂದುಕೊಂಡು ಹಾಲು ಕೊಡುತ್ತಾಳೆ. ಆಗ ಹಾಲು ಕಡಿಮೆಯಾಯಿತು ಎನ್ನುತ್ತೇವೆ. ಹಸು, ಎತ್ತು ಇದ್ದ ಮನೆಗೆ ವಾಸ್ತು ಬೇಕಾಗಿರಲಿಲ್ಲ. ಆ ಮನೆಗೆ ಋಣಾತ್ಮಕ ಶಕ್ತಿ ಬರುತ್ತಿರಲಿಲ್ಲ ಎಂದು ಆರೆಸ್ಸೆಸ್ ಪ್ರಾಂತ ಗೋ ಸೇವಾ ಪ್ರಮುಖ್ ಕುಮಾರಸ್ವಾಮಿ ತಿಳಿಸಿದರು.


ಗೋ ಸೇವಾ ಗತಿವಿಧಿ ಕರ್ನಾಟಕ ವತಿಯಿಂದ ಆಯೋಜಿಸಿದ್ದ 'ನಂದಿ ರಥಯಾತ್ರೆ' ಕಾರ್ಯಕ್ರಮ ಗುರುವಾರ ಸಂಜೆ ಚಿತ್ರದುರ್ಗ ನಗರ ಪ್ರವೇಶಿಸಿ, ಮುಖ್ಯರಸ್ತೆಯಲ್ಲಿ ಸಂಚರಿಸಿದ ನಂತರ ಕಬೀರಾನಂದ ಮಠದ ಆವರಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದರು.




ತಾಯಿಯ ಎದೆಹಾಲು ಬಿಟ್ಟ ನಂತರ ನಾವು ಸಾಯುವವರೆಗೆ ಹಸುವಿನ ಹಾಲು ಕುಡಿಯುತ್ತೇವೆ. ಆದರೆ, ಅಂತಹ ಹಸುವನ್ನು ಬಿಟ್ಟು ಇಂದು ಎಚ್‌ಎಫ್, ಜೆರ್ಸಿ ಎಂಬ ಹಸುವಿನ ರೀತಿಯ ಪ್ರಾಣಿ ಹಾಲು ಕುಡಿದು ಆರೋಗ್ಯ ಹಾಳು ಮಾಡಿಕೊಳ್ಳುತ್ತಿದ್ದೇವೆ. ದೇಶಕ್ಕೆ 70 ಲಕ್ಷ ಲೀ. ಹಾಲು ಬೇಕು. ಆದರೆ, ಉತ್ಪಾದನೆ 20 ಲಕ್ಷ ಲೀ. ಮಾತ್ರ ಆಗುತ್ತಿದೆ.


ಪುಟ 2


## ಹಿರೇಕಬ್ಬಿಗೆರೆ ಗೊಲ್ಲರಹಟ್ಟಿ: ಮೌಢ್ಯತೆ, ಬಾಲ್ಯವಿವಾಹ ನಿಷೇಧ ಕುರಿತು ಜಾಗೃತಿ



ಚಿತ್ರದುರ್ಗ: ಚಿತ್ರದುರ್ಗ ತಾಲ್ಲೂಕಿನ ಹಿರೇಕಬ್ಬಿಗೆರೆ ಗೊಲ್ಲರಹಟ್ಟಿಯಲ್ಲಿ ಈಚೆಗೆ ಗೊಲ್ಲರಹಟ್ಟಿಗಳ ಮೌಢ್ಯತೆ ಕುರಿತು ಜಾಗೃತಿ ಮೂಡಿಸಲಾಯಿತು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಭರಮಸಾಗರ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಹಿರೇಕಬ್ಬಿಗೆರೆ ಗೊಲ್ಲರಹಟ್ಟಿಯ ಸರ್ಕಾರಿ ಪ್ರೌಢಶಾಲೆಯಲ್ಲಿ ಮೇಲ್ವಿಚಾರಕಿ ದೇವಿಕಾ ಅವರು, ಮೌಢ್ಯತೆ ಕುರಿತು ತಾಯಂದಿರಿಗೆ ಹಾಗೂ ಮಕ್ಕಳಿಗೆ ತಿಳುವಳಿಕೆ ನೀಡಿದರು. ಜೊತೆಗೆ ಬಾಲ್ಯ ವಿವಾಹ ನಿಷೇಧ ಕಾಯ್ದೆ ಕುರಿತು ಅರಿವು ಮೂಡಿಸಲಾಯಿತು.


ಪುಟ 3


## ಪ್ರಮುಖ ಸುದ್ದಿ

### ರಾತ್ರಿವೇಳೆ ಕೈಕೊಡುವ ವಿದ್ಯುತ್: ಬೆಸ್ಕಾಂ ಇಲಾಖೆಯ ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಆಕ್ರೋಶ

# ಹೆದ್ದಾರಿ ತಡೆದು ಪ್ರತಿಭಟನೆ : ಹೆಚ್ಚುವರಿ ಜಿಲ್ಲಾಧಿಕಾರಿಗಳ ಭೇಟಿ





» ಚಳ್ಳಕೆರೆ

ಗ್ರಾಮೀಣ ಪ್ರದೇಶಗಳಲ್ಲಿ ಪ್ರತಿನಿತ್ಯ ರಾತ್ರೋರಾತ್ರಿ ಯಾವುದೇ ಮುನ್ಸೂಚನೆ ನೀಡದೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯ ಉಂಟಾಗುತ್ತಿದ್ದು, ಇದರಿಂದ ನೀರಾವರಿ ಬೆಳೆ ಬೆಳೆದ ರೈತರಿಗೂ ಹಾಗೂ ಓದುವ ವಿದ್ಯಾರ್ಥಿಗಳಿಗೂ ತೊಂದರೆಯಾಗುತ್ತಿದ್ದು, ಬೆಸ್ಕಾಂ ಇಲಾಖೆ ಈ ಬಗ್ಗೆ ಮನವಿ ಮಾಡಿದರೂ ನಿರ್ಲಕ್ಷ್ಯ ವಹಿಸಿದ ಹಿನ್ನೆಲೆಯಲ್ಲಿ ವಿವಿಧ ರೈತ ಸಂಘದ ಒಕ್ಕೂಟಗಳು ಬೇಡರೆಡ್ಡಿಹಳ್ಳಿ ಬಸವರೆಡ್ಡಿ ನೇತೃತ್ವದ ರಾಷ್ಟ್ರೀಯ ಹೆದ್ದಾರಿ ಗರಣಿಕ್ರಾಸ್ ಬಳಿ ಶುಕ್ರವಾರ ರಸ್ತೆ ತಡೆದ ನಡೆಸಿ ಪ್ರತಿಭಟನೆ ನಡೆಸಿದರು.

ಪ್ರತಿಭಟನಕಾರರನ್ನು ಉದ್ದೇಶಿಸಿ ಮಾತನಾಡಿದ ರೈತ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಬೇಡರೆಡ್ಡಿಹಳ್ಳಿ ಬಸವರೆಡ್ಡಿ, ಸರ್ಕಾರ ರೈತರ ನೀರಾವರಿ ಜಮೀನುಗಳಿಗೆ ಸರಿಯಾಗಿವಿದ್ಯುತ್ ಕೊಡದೆ ಉದ್ದೇಶಪೂರವಾಗಿ ರೈತರನ್ನು ಕಷ್ಟದಲ್ಲಿ ಸಿಲುಕಿಸುತ್ತಿದೆ. ರೈತ ಬೆಳೆ ಬೆಳೆಯುವುದು ಕಷ್ಟವಾಗಿದೆ. ಸರ್ಕಾರವೇ ಪರೋಕ್ಷವಾಗಿ ರೈತರನ್ನು ಸಾಲಗಾರರನ್ನಾಗಿ ಮಾಡುತ್ತಿದೆ. ಪರೀಕ್ಷೆಗಳು ಹತ್ತಿರ ಬರುತ್ತಿದ್ದು ವಿದ್ಯಾರ್ಥಿಗಳು ಸಹ ವಿದ್ಯುತ್ ಅಡಚಣೆಯಿಂದ ತಮ್ಮ ವಿದ್ಯಾಭ್ಯಾಸವನ್ನು ಮುಂದುವರೆಸದೆ ಪರದಾಡುವ ಪರಿಸ್ಥಿತಿ ಉಂಟಾಗಿದೆ, ಬೆಸ್ಕಾಂ ಇಲಾಖೆಯೂ ಸೇರಿದಂತೆ ಯಾವುದೇ ಅಧಿಕಾರಿಗಳು ಈ ಬಗ್ಗೆ ಗಮನಹರಿಸುತ್ತಿಲ್ಲ. ಆದ್ದರಿಂದ ರಸ್ತೆ ತಡೆ ನಡೆಸಿ ಪ್ರತಿಭಟಿಸಲಾಗುತ್ತಿದೆ ಎಂದರು.

ಸ್ಥಳಕ್ಕೆ ಭೇಟಿ ನೀಡಿದ್ದ ಅಪರಜಿಲ್ಲಾಧಿಕಾರಿ ಕುಮಾರಸ್ವಾಮಿ, ಇತ್ತೀಚಿನ ದಿನಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗುತ್ತಿದ್ದು, ರೈತರ ನೀಡಿದ ಮನವಿಯನ್ನು ಬೆಸ್ಕಾಂ ಇಲಾಖೆ ಅಧಿಕಾರಿಗಳಿಗೆ ನೀಡಿ ಪರಿಹಾರವನ್ನು ಕಂಡುಕೊಳ್ಳುವಂತೆ ನಿರ್ದೇಶನ ನೀಡಲಾಗುವುದು. ರೈತರು ತಮಗೆ ಪ್ರತಿನಿತ್ಯ ಆಗುತ್ತಿರುವ ತೊಂದರೆ ಬಗ್ಗೆ ಮುಷ್ಕರ ನಡೆಸಿ ಸರ್ಕಾರದ ಗಮನಸೆಳೆದಿದ್ದಾರೆ. ಈ ಬಗ್ಗೆ ಕ್ರಮವಹಿಸಲು ಸೂಚನೆ ನೀಡಲಾಗುವುದು ಎಂದರು. ಬೆಸ್ಕಾಂ ಸೂಪರ್‌ಡೆಂಟ್ ಇಂಜಿನಿಯರ್ ಪಾಟೇಲ್ ಮಾತನಾಡಿ, ತಮ್ಮ ಮನವಿಯನ್ನು ಸ್ವೀಕರಿಸಿದ್ದು ಇಲಾಖೆಯಿಂದ ಈ ಸಮಸ್ಯೆ ನಿವಾರಿಸಲು ಪ್ರಮಾಣಿಕ ಪ್ರಯತ್ನ ಮಾಡಲಾಗುವುದು. ರಾತ್ರಿ ವೇಳೆಯಲ್ಲಿ ಕೆಲವೆಡೆ ಮಾತ್ರ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯವಾಗುತ್ತಿದೆ, ಇದನ್ನು ನಿಯಂತ್ರಿಸಲು ಅಧಿಕಾರಿಗಳಿಗೆ ಸೂಚನೆ ನೀಡುವುದಾಗಿ ತಿಳಿಸಿದರು.

ತಹಶೀಲ್ದಾರ್ ರೇಹಾನ್‌ಪಾಷ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ, ಡಿವೈಎಸ್ಪಿ ಟಿ.ಬಿ.ರಾಜಣ್ಣ, ರೈತ ಮುಖಂಡರಾದ ಮಲ್ಲಿಕಾರ್ಜುನ್, ಕೆ.ಟಿ.ತಿಪ್ಪೇಸ್ವಾಮಿ, ಚಂದ್ರಣ್ಣ, ನರಸಿಂಹರೆಡ್ಡಿ, ಸಣ್ಣತಿಪ್ಪೇಸ್ವಾಮಿ, ರಂಗಾರೆಡ್ಡಿ, ರವಿಕುಮಾರ್, ಪ್ರಶಾಂತ್‌ರೆಡ್ಡಿ, ಮೇಟೀನಾಯ್ಕ, ಬಸವರಾಜು, ಗಂಗಾಧರ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### 22ಕ್ಕೆ ಜಿಲ್ಲಾ ನ್ಯಾಯಾಲಯದಲ್ಲಿ ಆಯುಷ್ ಆರೋಗ್ಯ ತಪಾಸಣೆ

» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ದಾವಣಗೆರೆ. ಜಿಲ್ಲಾ ಆಯುಷ್ ಇಲಾಖೆ, ಜಿಲ್ಲಾ ವಕೀಲರ ಸಂಘ, ಜಿಲ್ಲಾ ನ್ಯಾಯಾಂಗ ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಇವರ ಸಹಯೋಗದೊಂದಿಗೆ ರಾಷ್ಟ್ರೀಯ ಆಯುಷ್ ಅಭಿಯಾನದ ಅಡಿಯಲ್ಲಿ ಆಯುಷ್ ಆರೋಗ್ಯ ತಪಾಸಣೆ ಮತ್ತು ಔಷಧಿ ವಿತರಣಾ ಶಿಬಿರ ಫೆ.22ರ ಶನಿವಾರ ಬೆಳಿಗ್ಗೆ 10.30ಕ್ಕೆ ನಗರದ ದೇವರಾಜ ಅರಸು ಬಡಾವಣೆಯಲ್ಲಿನ ವಕೀಲರ ಸಾಂಸ್ಕೃತಿಕ ಸಮುದಾಯ ಭವನದಲ್ಲಿ ನಡೆಯಲಿದೆ.ಶಿಬಿರ ಉದ್ಘಾಟನೆಯನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ನೆರವೇರಿಸುವರು. ಮುಖ್ಯ ಅತಿಥಿಗಳಾಗಿ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಂಜಪ್ಪ ಹನುಮಂತಪ್ಪ ಅಣ್ಣಯ್ಯನವರ, 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಆರ್.ಎನ್.ಪ್ರವೀಣ್‌ಕುಮಾರ್, ಎಸ್‌ಟಿಎಫ್‌ಸಿ ನ್ಯಾಯಾಧೀಶರಾದ ಶ್ರೀರಾಮ ನಾರಾಯಣ ಹೆಗಡೆ, ಜಿಲ್ಲಾ ಕೌಟುಂಬಿಕ ನ್ಯಾಯಾಲಯದ ನ್ಯಾಯಾಧೀಶರಾದ ಶಿವಪ್ಪ ಗಂಗಪ್ಪ ಸಲಗರೆ, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರಾದ ಟಿ.ಎಂ.ನಿವೇದಿತಾ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ, ಹಿರಿಯ ಸಿವಿಲ್ ನ್ಯಾಯಾಧೀಶರಾದ ಮಹಾವೀರ ಮ. ಕರೆಣ್ಣವರ ಆಗಮಿಸಲಿದ್ದಾರೆ. ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್. ಅರುಣ್‌ಕುಮಾರ್ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ವಕೀಲರ ಸಂಘದ ಪದಾಧಿಕಾರಿಗಳು, ಕಾರ್ಯಕಾರಿ ಸಮಿತಿ ಸದಸ್ಯರು ತಿಳಿಸಿದ್ದಾರೆ.

### ಸಿ.ಎನ್ ಹಳ್ಳಿ ಗ್ರಾಪಂ ಅಧ್ಯಕ್ಷೆಯಾಗಿ ಗೌರಮ್ಮ ಅವಿರೋಧವಾಗಿ ಆಯ್ಕೆ

» ಪರಶುರಾಂಪುರ



ಸಮೀಪದಚೆನ್ನಮ್ಮನಾಗತಿಹಳ್ಳಿಗ್ರಾಪಂಅಧ್ಯಕ್ಷೆಯಾಗಿ ಗೌರಮ್ಮ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಗುರುವಾರ ಚುನಾವಣೆ ನಡೆಯಿತು.ಈ ವೇಳೆಯಲ್ಲಿ ಅಧ್ಯಕ್ಷರ ಸ್ಥಾನಕ್ಕೆ ಒಬ್ಬರು ಮಾತ್ರ ನಾಮಪತ್ರ ಸಲ್ಲಿಸಿದ್ದರಿಂದ ಅಧ್ಯಕ್ಷರನ್ನಾಗಿ ಗೌರಮ್ಮ ಅವರನ್ನ ಚುನಾವಣಾಧಿಕಾರಿ ಬಿಇಓ ಸುರೇಶ್ ಘೋಷಣೆ ಮಾಡಿದರು. ಈ ವೇಳೆಯಲ್ಲಿ ಬೆಂಬಲಿತ ಗ್ರಾಪಂ ಸದಸ್ಯರು,ಗ್ರಾಪಂ ಸಿಬ್ಬಂದಿ,ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

### ಹಿಂದೆ ಹಸು ಇದ್ದ ಮನೆಗೆ ವಾಸ್ತು ಬೇಕಾಗಿರಲಿಲ್ಲ

» ಮೊದಲ ಪುಟದಿಂದ

ದೇಸಿ ಹಸುವಿನ ಹಾಲು ಬಿಟ್ಟು ಬೇರೆ ತಳಿಯ ಹಾಲು ಬಳಕೆ ಮಾಡಿದ ಪರಿಣಾಮ ಚಿಕ್ಕ ಮಕ್ಕಳು ಋತುಮತಿಯಾಗುತ್ತಿದ್ದಾರೆ. ಎಳೆಯ ವಯಸ್ಸಿಗೆ ದೃಷ್ಟಿ ಮಂದವಾಗುತ್ತಿದೆ. ಇದಕ್ಕೆಲ್ಲಾ ನಾವು ಸೇವಿಸುತ್ತಿರುವ ಆಹಾರವೇ ಕಾರಣ ಎಂದು ಹೇಳಿದರು.ಹತ್ತು ತಿಂಗಳ ಮಗುವಿಗೆ ಅನ್ನಪ್ರಾಶನ ಮಾಡುವ ಸಂಪ್ರದಾಯವಿದೆ. ಆದರೆ, ನಾವು ಸೇವಿಸುವ ಅಥವಾ ಮಗುವಿಗೆ ನೀಡುವ ಆಹಾರದಲ್ಲಿ ಎಷ್ಟು ವಿಷ ಇದೆ ಎಂದು ಆಲೋಚನೆ ಮಾಡಬೇಕಾಗಿದೆ. 40-50 ವರ್ಷಗಳ ಹಿಂದೆ ನಮ್ಮ ಜಮೀನಿನಲ್ಲಿ ಓಡಾಡಿದರೆ ಹೂವಿನ ಮೇಲೆ ನಡೆದ ಅನುಭವ ಆಗುತ್ತಿತ್ತು. ಆದರೆ, ಈಗ ಮುಳ್ಳಿನ ಮೇಲೆ ನಡೆದ ಅನುಭವ ಆಗುತ್ತಿದೆ ಎಂದರು.

ಇಂದು ರೈತನಿಗೆ ವಿಷಮುಕ್ತ ಆಹಾರ ಕೊಡಲು ಆಗುತ್ತಿಲ್ಲ. ನಮ್ಮತನ ಎನ್ನುವ ಎಲ್ಲವನ್ನೂ ಕಳೆದುಕೊಂಡು ಪ್ರಗತಿಪರ ರೈತ ಎಂದು ಹೇಳಿಕೊಳ್ಳುವ ದುಸ್ಥಿತಿಯಿದೆ. ಹಿಂದೆ ನಮ್ಮ ಜಮೀನಿನ ಗೊಬ್ಬರಕ್ಕಾಗಿ ಹಸು ಸಾಕುತ್ತಿದ್ದರು. ಹಾಲು ಮಾರಾಟಕ್ಕೆ ಅಲ್ಲ. ಮನುಷ್ಯ ಆರ್ಥಿಕತೆ ಹಿಂದೆ ಬಿದ್ದು ಹಾಲು ಮಾರಾಟ ಮಾಡುತ್ತಿದ್ದಾನೆ. ಕರುವಿಗೂ ಹಾಲು ಬಿಡದೆ ಎಲ್ಲವನ್ನೂ ಕರೆದುಕೊಂಡು ನಾವು ದರಿದ್ರರಾಗುತ್ತಿದ್ದೇವೆ ಎಂದು ತಿಳಿಸಿದರು.ಹಸುವನ್ನು ಕರೆಯುವಾಗ ಕರು ಹಾಲು ಕುಡಿಯುತ್ತಿರುವಾಗಲೇ ಹಾಲು ಕರೆದರೆ ಆ ತಾಯಿ ಬೇಕಾದಷ್ಟು ಹಾಲು ಕೊಡುತ್ತಾಳೆ. ಕರು ಕಟ್ಟಿಹಾಕಿ ಹಾಲು ಕರೆದರೆ ನೊಂದುಕೊಂಡು ಹಾಲು ಕೊಡುತ್ತಾಳೆ. ಆಗ ಹಾಲು ಕಡಿಮೆಯಾಯಿತು ಎನ್ನುತ್ತೇವೆ. ಹಸು, ಎತ್ತು ಇದ್ದ ಮನೆಗೆ ವಾಸ್ತು ಬೇಕಾಗಿರಲಿಲ್ಲ. ಆ ಮನೆಗೆ ಋಣಾತ್ಮಕ ಶಕ್ತಿ ಬರುತ್ತಿರಲಿಲ್ಲ ಎಂದರು.ಹಸು ನಮ್ಮ ಮನೆಯ ಆಸ್ತಿ, ಹಸು ನಮ್ಮ ಮನೆಯ ಬ್ಯಾಂಕ್, ಹಸು ಇದ್ದ ಮನೆಗೆ ವಾಸ್ತು ಬೇಕಾಗಿರಲಿಲ್ಲ. ಆದರೆ, ಇಂದು ಹಸುವಿನ ಮೆರವಣಿಗೆ ಮಾಡಿ ಜಾಗೃತಿ ಮೂಡಿಸಬೇಕಾದ ಸ್ಥಿತಿ ಬಂದಿದೆ ಎಂದು ಕುಮಾರಸ್ವಾಮಿ ಬೇಸರ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಮಾಜಿ ಶಾಸಕರಾದ ಜಿ.ಎಚ್. ತಿಪ್ಪಾರೆಡ್ಡಿ, ಸಂಘ ಪರಿವಾರದ ಪ್ರಮುಖರಾದ ಜ್ಞಾನೇಶ್, ರಾಜಕುಮಾರ್, ಶ್ರೀನಾಥ್, ಉಮೇಶ್, ದೇವರಾಜ್ ಕೋಟ್ಲಾ, ಓಂಕಾರ್, ರುದ್ರೇಶ್, ಸಂಪತ್‌ಕುಮಾರ್, ಭಾರ್ಗವಿ ದ್ರಾವಿಡ್, ಛಲವಾದಿ ತಿಪ್ಪೇಸ್ವಾಮಿ, ಯೋಗೀಶ್ ಸಹ್ಯಾದ್ರಿ ಇತರರಿದ್ದರು.

# ಸಂತ ಸೇವಾಲಾಲ್ 286ನೇ ಜಯಂತ್ಯುತ್ಸವ

» ಚಿತ್ರದುರ್ಗ





ಸಂತ ಶ್ರೀ ಸೇವಾಲಾಲ್ ಮಹಾರಾಜ್‌ರ ತಮ್ಮ ಜೀವನದಲ್ಲಿ ನಡೆದ ತತ್ವ ಸಿದ್ದಾಂತಗಳನ್ನು ನಮ್ಮ ಜೀವನ ದಲ್ಲಿ ಅಳವಡಿಕೆ ಮಾಡಿಕೊಂಡಾಗ ಮಾತ್ರ ಸಂತ ಶ್ರೀ ಸೇವಾಲಾಲ್ ಮಹಾರಾಜ್‌ರ ಜಯಂತಿ ಆಚರಣೆಗೆ ಅರ್ಥ ಬರುತ್ತದೆ ಎಂದು ಮಾಜಿ ಉಪ ಮುಖ್ಯಮಂತ್ರಿಗಳು ಹಾಗೂ ಸಂಸದ ಗೋವಿಂದ ಎಂ. ಕಾರಜೋಳ ಲಂಬಾಣಿ ಜನಾಂಗಕ್ಕೆ ಕರೆ ನೀಡಿದರು.

ನಗರದ ಬಿ.ಡಿ. ರಸ್ತೆಯಲ್ಲಿನ ಬಂಜಾರ ಭವನದಲ್ಲಿ ಶುಕ್ರವಾರ ಬಂಜಾರ ಸಮಾಜದಿಂದ ಹಮ್ಮಿಕೊಳ್ಳಲಾಗಿದ್ದ ಸಂತ ಶ್ರೀ ಸೇವಾಲಾಲ್ ಮಹಾರಾಜ್ ಅವರ 286ನೇ ಜಯಂತ್ಯುತ್ಸವ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ದೇಶದಲ್ಲಿ ಕನ್ಯಾಕುಮಾರಿಯಿಂದ ಹಿಡಿದು ಕಾಶ್ಮೀರದವರೆಗೂ ಲಂಬಾಣಿ ಜನಾಂಗ ಒಂದೇ ಭಾಷೆ, ಒಂದೇ ರೀತಿಯಾದ ವೇಷ ಭೂಷಣವನ್ನು ಹೊಂದಿದೆ. ಈ ರೀತಿಯಾದ ಒಂದೇ ಭಾಷೆ, ಒಂದೇ ರೀತಿಯಾದ ವೇಷ ಭೂಷಣವನ್ನು ಹೊಂದಿದ ಜನಾಂಗ ನಮಗೆ ಎಲ್ಲೂ ಸಹಾ ಸಿಗುವುದಿಲ್ಲ, ಅದು ಸಿಕ್ಕರೆ ಲಂಬಾಣಿ ಜನಾಂಗದಲ್ಲಿ ಮಾತ್ರವೇ ಇದು ಬಂಜಾರ ಸಮುದಾಯವನ್ನು ಒಗ್ಗಟು ಮಾಡುವ ಕೆಲಸವನ್ನು ಮಾಡುತ್ತದೆ ಎಂದು ತಿಳಿಸಿದರು.

ಸಂತ ಸೇವಾಲಾಲ್ ಮಹರಾಜು 286 ವರ್ಷಗಳ ಹಿಂದೆ ಆಗಿ ಹೋಗಿರುವವರು, ಅವರನ್ನು ಇಂದಿಗೂ ಸಹಾ ಪುಣ್ಯ ಸ್ಮರಣೆಯನ್ನು ಮಾಡಲಾಗುತ್ತಿದೆ. ಅವರು ಬಿಟ್ಟು ಹೋದ ಸಮಾಜ ಕಲ್ಯಾಣಕ್ಕಾಗಿ ಮಾನವ ಕಲ್ಯಾಣಕ್ಕಾಗಿ ಸಂದೇಶಗಳನ್ನು ಚಾಚು ತಪ್ಪದೆ ನಮ್ಮ ನಿತ್ಯ ಜೀವನದಲ್ಲಿ ಅಳವಡಿಕೆಯನ್ನು ಮಾಡಿಕೊಂಡಾಗ ಮಾತ್ರ ಈ ರೀತಿಯಾದ ಜಯಂತಿ ಆಚರಣೆಗೆ ಅರ್ಥ ಬರುತ್ತದೆ ಎಂದ ಅವರು, ಮಾನವ ಕುಲ ಕಲ್ಯಾಣವಾಗುತ್ತದೆ. ಅವರು ಬಯಸಿದಂತ ಸಮಾಜ ನಿರ್ಮಾಣವಾಗುತ್ತದೆ. ನಾವೆಲ್ಲರು ಒಟ್ಟಾಗಿ ಒಂದಾಗಿ ಉತ್ತಮವಾದ ಸಮಾಜವನ್ನು ಮುನ್ನಡೆಸುವ ಕೆಲಸವನ್ನು ಮಾಡಬೇಕಿದೆ ಎಂದು ಸಂಸದರು ಕರೆ ನೀಡಿದರು.

ಹಿಂದುಳಿದ ಸಮಾಜಗಳಲ್ಲಿ ಒಗ್ಗಟ್ಟು ಬಹಳಕಡಿಮೆಇರುತ್ತದೆ.ಒಳ್ಳೆಯಕೆಲಸವನ್ನು ಮಾಡಿದರೆ ಅದನ್ನು ಕಾಲೆಳೆಯುವವರ ಸಂಖ್ಯೆ ಹೆಚ್ಚಾಗಿ ಇರುತ್ತದೆ. ಇದರಿಂದ ಒಳ್ಳೇಯ ಕೆಲಸವನ್ನು ಮಾಡುವವರಿಗೆ ಪ್ರೋತ್ಸಾಹವನ್ನು ನೀಡಬೇಕಿದೆ. ಬೆಳಸಬೇಕಿದೆ. ಮುಂದುವಯ್ಯುವಂತ ಕಾರ್ಯವನ್ನು ಮಾಡಬೇಕಿದೆ. ಇಂದಿನ ದಿನಮಾನದಲ್ಲಿ ಶಿಕ್ಷಣದ ಅಗತ್ಯ ಇದೆ ಈ ಹಿಂದೆ ಬಂಜಾರ ಸಮುದಾಯದಲ್ಲಿ ಶಿಕ್ಷಣದ ಕೊರತೆ ಇತ್ತು ಅದರೆ ಈಗ ಈ ಸಮುದಾಯವರು ಹೆಚ್ಚಾಗಿ ಶಿಕ್ಷಣವನ್ನು ಪಡೆಯುತ್ತಿದ್ದಾರೆ ಇದು ಸಂತೋಷದ ಸಂಗತಿಯಾಗಿದೆ. ಒಂದು ಕಾಲದಲ್ಲಿ ಈ ಸಮುದಾಯದವರು ತಾಂಡಗಳನ್ನು ಬಿಟ್ಟು ಹೊರಗೆ ಬರುತ್ತಿರಲಿಲ್ಲ ಅಲ್ಲಿಯೇ ಕೂಲಿಯನ್ನು ಮಾಡುತ್ತಾ ಅಲ್ಲಿಯೇ ತಮ್ಮ ಜೀವನವನ್ನು ನಡೆಸುತ್ತಿದ್ದರು. ಮಕ್ಕಳಿಗೆ ಸರಿಯಾಗಿ ಶಿಕ್ಷಣವನ್ನು ನೀಡುತ್ತಿರಲಿಲ್ಲ, ಆದರೆ ಈಗ ಅವರು ವಿದ್ಯಾವಂತರಾಗಿ ಉದ್ಯೋಗವಂತರಾಗಿ ಬುದ್ದಿವಂತರಾಗಿದ್ದಾರೆ. ಸಮಾಜದಲ್ಲಿ ಗೌರವಯುತವಾದ ಬದುಕನ್ನು ನಡೆಸುತ್ತಿದ್ದಾರೆ. ಇದು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದಾರೆ ಬಂಜಾರ ಸಮುದಾಯದವರು ದುಡಿಮೆಯಲ್ಲಿ ಯಾವೊತ್ತು ಸಹಾ ಹಿಂದೆ ಬೀಳುವುದಿಲ್ಲ ಶ್ರಮವಹಿಸಿದುಡಿಯುತ್ತಾರೆ.ದುಡಿಮೆಯಲ್ಲಿ ದೇಶದಲ್ಲಿಯೇ ಬಜಾಂರ ಸಮುದಾಯ ಮುಂದೆ ಇದೆ. ಬುದ್ದಿವಂತಿಕೆ, ಶಕ್ತಿಯಿಂದ ಸಾಮರ್ಥದಿಂದಲೂ ಸಹಾ ಈ ಸಮುದಾಯ ಕೆಲಸವನ್ನು ಮಾಡುತ್ತಿದೆ. ಈ ಜನಾಂಗದ ವೇಷ ಆಕರ್ಷಣಿಯವಾಗಿದೆ ಇದನ್ನು ಬೇರೆಯವರು ಹಾಕಿಕೊಂಡು ಪೋಟೋವನ್ನು ತೆಗೆಸಿಕೊಳ್ಳುತ್ತಿದ್ದಾರೆ. ಭಾಷೆಯಲ್ಲಿ ಒಂದೇ ಇರುವ ಸಮಾಜ ಎಂದರೆ ಅದು ದೇಶದಲ್ಲಿ ಬಂಜಾರ ಸಮುದಾಯ ಮಾತ್ರ, ತಮ್ಮಲ್ಲಿನ ಪ್ರತಿಭೆಯನ್ನು ಹೆಚ್ಚು ಮಾಡುವಂತ ಗಮನ ನೀಡಿ, ಮುಖ್ಯವಾಹಿನಿಗೆ ಬರಬೇಕು ಮುಖ್ಯ ಸ್ಥಾನದಲ್ಲಿ ಸಮಾಜ ಇರಬೇಕಿದೆ ಎಂದು ತಿಳಿಸಿದರು.

ಯಾವುದೇ ಹಾಗೂ ಯಾರ ಆಪಪ್ರಚಾರಕ್ಕೂ ಸಹಾ ಕಿವಿಗೂಡಬೇಡಿ ನಂಬಬೇಡಿ, ಯಾರ ಮಾತನ್ನು ನಂಬಬೇಡಿ, ಹಿಂದುಳಿದ ಎಲ್ಲಾ ಸಮುದಾಯಗಳ ಏಳ್ಗೆ ನಾನು ನಿಮ್ಮ ಜೊತೆಯಲ್ಲಿ ಇರುತ್ತೇನೆ ನೀವು ಹಾಕುವ ಕಾರ್ಯಕ್ರಮಗಳಿಗೆ ನಾನು ಮುಂದೆ ನಿಂತು ನಿಮ್ಮ ಬೆನ್ನಲುಬಾಗಿ ಇರುತ್ತೇನೆ ಎಂದು ಸಂಸದ ಗೋವಿಂದ ಕಾರಜೋಳ ಭರವಸೆಯನ್ನು ನೀಡಿದರು.

ಸೇವಾಲಾಲ್ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದ ಕರ್ನಾಟಕ ತಾಂಡ ಅಭಿವೃದ್ಧಿ ನಿಗಮದ ಅಧ್ಯಕ್ಷ ಎನ್.ಜಯದೇವನಾಯ್ಕ ಮಾತನಾಡಿ, ಚಿತ್ರದುರ್ಗ ಜಿಲ್ಲೆಯಲ್ಲಿ ಲಂಬಾಣಿ ಜನಾಂಗ 1 ಲಕ್ಷದಿಂದ 1ವರೆ ಲಕ್ಷದವರೆಗೆ ಜನಾಂಗ ಇದೆ ಇಷ್ಟು ಇದ್ದ ಜನಾಂಗ ಈ ರೀತಿಯ ಕಾರ್ಯಕ್ರಮದಲ್ಲಿ ಹೆಚ್ಚಿನ ರೀತಿಯಲ್ಲಿ ಜನತೆ ಭಾಗವಹಿಸಬೇಕಿತ್ತು, ಆದರೆ ಕಡಿಮೆ ಸಂಖ್ಯೆಯಲ್ಲಿ ಬಂದಿರುವುದು ದುರಂತವಾಗಿದೆ. ದೇಶದ ಕಾಶ್ಮೀರದಿಂದ ಹಿಡಿದು ಕನ್ಯಾಕುಮಾರಿಯವರೆಗೂ ಈ ಜನಾಂಗ ವ್ಯಾಪ್ತಿಸಿದ್ದು, ಇಲ್ಲಿ ಒಂದೇ ರೀತಿಯ ಉಡುಗೆ ತೊಡುಗೆಯನ್ನು ಹೊಂದಿದೆ. ನಾವು ಅನೇಕ ಜಾತಿಗಳ ಆಚಾರ ವಿಚಾರವನ್ನು ನೋಡಲಾಗಿದೆ. ಎಲ್ಲದರಲ್ಲೂ ಸಹಾ ಗಂಡು, ಹೆಣ್ಣು ಎಂದು ಭೇದವನ್ನು ಮಾಡಲಾಗಿದೆ ಆದರೆ ನಮ್ಮ ಬಂಜಾರ ಸಮುದಾಯದಲ್ಲಿ ಮಾತ್ರ ಗಂಡು ಹೆಣ್ಣು ಎಂದು ಭೇದ ಇಲ್ಲದೆ ಎಲ್ಲರು ಒಂದೇ ಎಂಬ ಭಾವನೆಯಿಂದ ನೋಡಲಾಗುತ್ತಿದೆ ಎಂದರು.

ಲಂಬಾಣಿ ಸಮಾಜದ ಜಿಲ್ಲಾಧ್ಯಕ್ಷ ಎಂ.ಸತೀಶ್ ಕುಮಾರ್ ಮಾತನಾಡಿ ನಮ್ಮ ಸಮುದಾಯದ ಮಕ್ಕಳಿಗೆ ಉಚಿತವಾಗಿ ಶಿಕ್ಷಣವನ್ನು ಕೊಡಿಸಬೇಕಿದೆ ಇದಕ್ಕೆ ಉಚುತವಾದ ಹಾಸ್ಟಲ್ ನೀಡಬೇಕಿದೆ ಆದರೆ ಈಗ ಹಾಸ್ಟಲ್ ಸದ್ಯಕ್ಕೆ ನಿಂತಿದೆ ಅದನ್ನು ಪುನರ್ ಸ್ಥಾಪನೆ ಮಾಡಬೇಕಿದೆ ಇದರ ಬಗ್ಗೆ ನಿಗಮದ ಅಧ್ಯಕ್ಷರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿ ಹಾಸ್ಟಲ್ ಪುನರ್ ಸ್ಥಾಪನೆ ಮಾಡಲು ಅನುವು ಮಾಡಿಕೊಂಡಬೇಕಿದೆ ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಮಹಿಳಾ ಘಟಕದ ತಾ.ಅಧ್ಯಕ್ಷರಾದ ಶ್ರೀಮತಿ ಗೀತಾಬಾಯಿ ಗುರುರಾಜ್, ಎಸ್.ಬಿ.ಐ.ನ ವ್ಯವಸ್ಥಾಪಕರಾದ ಗುರುರಾಜ್, ಬಿಜೆಪಿ ಜಿಲ್ಲಾಧ್ಯಕ್ಷರಾದ ಮುರಳಿ, ವೇದ ಆಗಮ ಪುರೋಹಿತರಾದ ಬ್ರಹ್ಮ ಸುನೀತ ಶಾಸ್ತ್ರಿಜಿ, ಮಾರುತಿ ನಾಯ್ಕ್, ನಾಗರಾಜ್ ನಾಯ್ಕ್, ಮಂಜುನಾಥ್ ನಾಯ್ಕ್, ವೀರಭದ್ರನಾಯ್ಕ್, ರಮೇಶ್ ನಾಯ್ಕ್, ವೆಂಕಟೇಶ್ ನಾಯ್ಕ್, ಗೀರೀಶ್ ನಾಯ್ಕ್ ಭಾಗವಹಿಸಿದ್ದರು.

ನಗರದ ಹಳೇ ಮಾಧ್ಯಮಿಕ ಶಾಲಾವಾರಣದಿಂದ ಜರುಗಿದ ಮೆರವಣಿಗೆಯನ್ನು ನಗರಸಭೆ ಅಧ್ಯಕ್ಷೆ ಬಿ.ಎನ್.ಸುಮಿತ್ರ ರಾಘವೇಂದ್ರ ಚಾಲನೆ ನೀಡಿದರು.ಕಳೆದ ಶೈಕ್ಷಣಿಕ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಶೇ.85ಕ್ಕಿಂತ ಹೆಚ್ಚು ಅಂಕಗಳಿಸಿದ ಸಮುದಾಯದ ಮಕ್ಕಳನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

# ಸರ್ಕಾರ ಬಜೆಟ್‌ನಲ್ಲಿ ಸರ್ಕಾರಿ ಶಾಲೆಗಳಿಗೆ ಹೆಚ್ಚಿನ ಅನುದಾನ ಮೀಸಲಿಡುವಂತೆ ಆಗ್ರಹ

» ಚಿತ್ರದುರ್ಗ

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನೀಡಿರುವ ಎಲ್ಲಾ ಭಾಗ್ಯಗಳನ್ನು ನಿಲ್ಲಿಸಿ ಸರ್ಕಾರಿ ಶಾಲೆಗಳಿಗೆ ಹೆಚ್ಚಿನ ಅನುದಾನ ನೀಡುವಂತೆ ಕರುನಾಡ ವಿಜಯಸೇನೆಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಶುಕ್ರವಾರ ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿ ಮೂಲಕ ರಾಜ್ಯದ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯ ನೇತೃತ್ವ ವಹಿಸಿದ್ದ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಮಾತನಾಡಿ ಮಕ್ಕಳು ಹಾಗೂ ಪೋಷಕರುಗಳು ಖಾಸಗಿ ಶಾಲೆಗಳ ಮೇಲೆ ವ್ಯಾಮೋಹವಿಟ್ಟುಕೊಂಡಿರುವುದರಿಂದ ಸರ್ಕಾರಿ ಶಾಲೆಗಳು ಮುಚ್ಚುವ ಹಂತ ತಲುಪಿರುವುದು ದುರಂತ. ರಾಜ್ಯದ ಮುಖ್ಯಮಂತ್ರಿಯಿಂದ ಹಿಡಿದು ಉನ್ನತ ಹುದ್ದೆಯಲ್ಲಿರುವ ಬಹುತೇಕ ಅಧಿಕಾರಿಗಳು ಸರ್ಕಾರಿ ಶಾಲೆಗಳಲ್ಲಿಯೇ ಓದಿರುವುದು ಎನ್ನುವುದನ್ನು ಶಿಕ್ಷಣ ಸಚಿವರು ಮರೆಯಬಾರದೆಂದು ಎಚ್ಚರಿಸಿದರು.ಸರ್ಕಾರಿ ಶಾಲೆಗಳಲ್ಲಿ ಶೌಚಾಲಯ ಸೇರಿದಂತೆ ಮೂಲಭೂತ ಸೌಕರ್ಯಗಳ ಕೊರತೆಯಿದೆ. ಹಾಗಾಗಿ ಮಾ. 7 ರಂದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಂಡಿಸಲಿರುವ ಬಜೆಟ್‌ನಲ್ಲಿ ಶಿಕ್ಷಣಕ್ಕೆ ಹಾಗೂ ಸರ್ಕಾರಿ ಶಾಲೆಗಳ ಅಭಿವೃದ್ದಿಗೆ ಹೆಚ್ಚಿನ ಅನುದಾನ ಮೀಸಲಿಡುವಂತೆ ಕೆ.ಟಿ.ಶಿವಕುಮಾರ್ ಒತ್ತಾಯಿಸಿದರು.ಕರುನಾಡ ವಿಜಯಸೇನೆ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವೀಣಗೌರಣ್ಣ, ಪ್ರಧಾನ ಕಾರ್ಯದರ್ಶಿ ಎಸ್. ಗೋಪಿನಾಥ್, ಕಾರ್ಯದರ್ಶಿ ಸಿ.ಜಗದೀಶ್, ಉಪಾಧ್ಯಕ್ಷೆ ರತ್ನಮ್ಮ, ಮುಜಾಹಿದ್, ನಿಸಾರ್‌ಅಹಮದ್, ಮೋಹನ್‌ಕುಮಾರ್, ಅಣ್ಣಪ್ಪ, ಯರ್‍ರಿಸ್ವಾಮಿ, ಸಿ.ತಿಪ್ಪೇಸ್ವಾಮಿ, ಪಾಂಡು, ಯಶವಂತ್, ಕಮಲ, ರಾಮಾಂಜನೇಯ, ಮಧು, ಅಖಿಲೇಶ್ ಸುರೇಶ್, ಅವಿನಾಶ್, ನಾಗರಾಜ್‌ಮುತ್ತು, ಹರೀಶ್‌ಕುಮಾರ್, ನಾಗೇಶ್ ಇನ್ನು ಅನೇಕರು ಪಾಲ್ಗೊಂಡಿದ್ದರು.




## ಅಖಂಡ ಕರ್ನಾಟಕ ರೈತ ಸಂಘದಿಂದ ಸಿಎಂಗೆ ಮನವಿ: ಪ್ರತಿನಿತ್ಯ ತ್ರೀಪೇಸ್ ವಿದ್ಯುತ್ ಸರಬರಾಜಿಗೆ ಒತ್ತಾಯ



» ಚಳ್ಳಕೆರೆ

ಅಖಂಡ ಕರ್ನಾಟಕ ರೈತ ಸಂಘದವತಿಯಿಂದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ರೈತರ ಹಲವಾರು ಭೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಮನವಿ ನೀಡಲಾಯಿತು. ಬಜೆಟ್ ಅಧಿವೇಶನದ ಹಿನ್ನಲೆಯಲ್ಲಿ ಅಖಂಡ ಕರ್ನಾಟಕ ರೈತ ಸಂಘ ತಾಲ್ಲೂಕು ಅಧ್ಯಕ್ಷ ಎ.ನಾಗರಾಜು ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಮನವಿ ಅರ್ಪಿಸಿದ್ದಾರೆ. ಪರಶುರಾಮಪುರ ಹೋಬಳಿ ವ್ಯಾಪ್ತಿಯಲ್ಲಿ ಪ್ರತಿನಿತ್ಯ ತ್ರೀಪೇಸ್ ವಿದ್ಯುತ್ ವಿತರಣೆ, ಪಿ.ಮಹದೇವರಪುರಲ್ಲಿ ಬೆಸ್ಕಾಂನ ಸಬ್‌ಸ್ಟೇಷನ್‌ಗೆ ಅನುದಾನ, ಹಿರಿಯೂರಿನ ವಾಣಿವಿಲಾಸ ಸಾಗರ ಕಾಲುವೆಯನ್ನು ಚಳ್ಳಕೆರೆ, ಮೊಳಕಾಲ್ಮೂರು ಕ್ಷೇತ್ರಗಳಿಗೆ ವಿಸ್ತರಿಸುವುದು, ಶೇಂಗಾ, ಈರುಳ್ಳಿ, ಟಮೋಟೊ ಬೆಳೆಗೆ ನಿಗದಿತ ಬೆಲೆ ಘೋಷಣೆ ಮುಂತಾದ ಸಮಸ್ಯೆಗಳ ಬಗ್ಗೆ ಮನವಿ ಮೂಲಕ ಮುಖ್ಯಮಂತ್ರಿಗಳ ಗಮನ ಸೆಳೆದರು. ಮನವಿಯನ್ನು ಸ್ವೀಕರಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ರೈತ ಹಿತದೃಷ್ಠಿಯಿಂದ ತಾವು ನೀಡಿದ ಮನವಿಯನ್ನು ಸ್ವೀಕರಿಸಿದ್ದು, ಸರ್ಕಾರ ನಿಮ್ಮ ಬೇಡಿಕೆಗಳ ಬಗ್ಗೆ ಸಕರಾತ್ಮವಾಗಿ ಸ್ಪಂದಿಸಲಿದೆ ಎಂದು ಭರವಸೆ ನೀಡಿದ್ದಾರೆಂದು ಅವರು ತಿಳಿಸಿದರು.

## ಪ್ರಮುಖ ಸುದ್ದಿ

### ಇ-ಖಾತಾ ಪಡೆಯಲು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಕರೆ

# ಖಾತಾ ಪಡೆಯಲು ಜಿಲ್ಲೆಯಲ್ಲಿ ಸಹಾಯವಾಣಿ ಸ್ಥಾಪನೆ

» ಚಿತ್ರದುರ್ಗ

ಜಿಲ್ಲೆಯ ಎಲ್ಲಾ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿರುವ, ಆದರೆ ಇದುವರೆಗೂ ಇ-ಖಾತಾ ಪಡೆಯದೇ ಇರುವ ಕಟ್ಟಡಗಳ ಮತ್ತು ನಿವೇಶನಗಳ ಮಾಲೀಕರು ನಗರಾಭಿವೃದ್ಧಿ ಇಲಾಖೆಯಿಂದ ನಿಯಮಾನುಸಾರ ಅವಕಾಶ ಕಲ್ಪಿಸಿಕೊಟ್ಟಂತೆ, ಮೂರು ತಿಂಗಳ ಒಳಗಾಗಿ ಅಂದರೆ 2025ರ ಮೇ 10ರೊಳಗೆ "ಬಿ" ರಿಜಿಸ್ಟರ್‌ನಲ್ಲಿ ನಮೂದಿಸಿಕೊಂಡು ಇ-ಖಾತಾ ಪಡೆಯಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಕರೆ ನೀಡಿದ್ದಾರೆ.

ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ಪ್ರಕರಣ 110 ರ ಅನ್ವಯ 'ಎ' ರಿಜಿಸ್ಟರ್‌ನಲ್ಲಿ ಅಂದರೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯಲಾದ ಬಡಾವಣೆಯಲ್ಲಿನ ಸ್ವತ್ತುಗಳಿಗೆ ಇ-ಖಾತಾ ನೀಡಲಾಗುತ್ತದೆ. ಆದರೆ, ಭೂ ಪರಿವರ್ತನೆ ಆಗದೇ ಉಪ-ವಿಭಜನೆ ಮಾಡಿ ನಿವೇಶನಗಳಾಗಿ ಮಾರಾಟ ಮಾಡಿರುವ ನಿವೇಶನ, ಕಟ್ಟಡಗಳು ಮತ್ತು ಭೂ ಪರಿವರ್ತನೆಯಾಗಿದ್ದು, ಆದರೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಯಾಗದ ಬಡಾವಣೆಗಳಲ್ಲಿನ ನಿವೇಶನ ಅಥವಾ ಕಟ್ಟಡಗಳಿಗೆ "ಬಿ" ರಿಜಿಸ್ಟರ್‌ನಲ್ಲಿ ನಮೂದಿಸಿಕೊಂಡು ಇ-ಖಾತಾ ನೀಡಲಾಗುತ್ತದೆ. ಈ ಅವಕಾಶವನ್ನು ಒಮ್ಮೆ ಮಾತ್ರ ನೀಡಲಾಗುತ್ತಿದ್ದು, ಕಟ್ಟಡ ನಿವೇಶನಗಳ ಮಾಲೀಕರು ಈ ಅವಕಾಶದ ಸದುಪಯೋಗ ಪಡಿಸಿಕೊಳ್ಳಲು ಜಿಲ್ಲಾಧಿಕಾರಿಗಳು ಕರೆ ನೀಡಿದ್ದಾರೆ.

"ಬಿ" ರಿಜಿಸ್ಟರ್‌ನಲ್ಲಿ ದಾಖಲಿಸುವ ಆಸ್ತಿಗಳಿಗೆ 2024-25ನೇ ಸಾಲಿಗೆ ಮೊದಲ ಬಾರಿಗೆ ಸ್ವತ್ತು ತೆರಿಗೆಯ 2 ರಷ್ಟು ತೆರಿಗೆಯನ್ನು ವಿಧಿಸಲಾಗುತ್ತದೆ. ತದನಂತರದ ವರ್ಷಗಳಲ್ಲಿ ಸ್ವತ್ತು ತೆರಿಗೆಯನ್ನು ಮಾತ್ರ ವಿಧಿಸಲಾಗುತ್ತದೆ. ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ಪ್ರಕರಣ 106 ಕ್ಕೆ ತಿದ್ದುಪಡಿ ತರಲಾದಂತೆ ದಿನಾಂಕ: 10.09.2024 ರಿಂದ ಜಾರಿಗೆ ಬಂದಂತೆ ಈ ತೆರಿಗೆಯನ್ನು ವಿಧಿಸಲಾಗುತ್ತದೆ.



"ಬಿ" ರಿಜಿಸ್ಟರ್‌ನಲ್ಲಿ ಸರ್ಕಾರಿ ಜಾಗದಲ್ಲಿರುವ ಸ್ವತ್ತುಗಳು, ಸರ್ಕಾರದ ನಿಗಮ ಮಂಡಳಿಗಳ ಜಾಗಗಳು, ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಜಾಗಗಳು ಹೊರತುಪಡಿಸಿ ದಿನಾಂಕ: 10.09.2024 ರ ಪೂರ್ವಕ್ಕೆ ನೋಂದಾಯಿತವಾದ ಭೂ ಪರಿವರ್ತನೆ ಆಗದೇ ಉಪ ವಿಭಜನೆ ಮಾಡಿ ನಿವೇಶನಗಳಾಗಿ ಮಾರಾಟ ಮಾಡಿರುವ ನಿವೇಶನ, ಕಟ್ಟಡಗಳು ಮತ್ತು ಭೂ ಪರಿವರ್ತನೆಯಾಗಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಯಾಗದ ಬಡಾವಣೆಗಳಲ್ಲಿನ ನಿವೇಶನ, ಕಟ್ಟಡಗಳಿಗೆ "ಬಿ" ರಿಜಿಸ್ಟರ್‌ನಲ್ಲಿ ನಮೂದಿಸಿಕೊಂಡು ಇ-ಖಾತಾ ನೀಡಲಾಗುತ್ತದೆ.

ಆದುದರಿಂದ, ಇದುವರೆಗೆ ಇ-ಖಾತಾ ಪಡೆಯದ ಅಂತಹ ಎಲ್ಲಾ ಸ್ವತ್ತುಗಳ ಮಾಲೀಕರು ಕೂಡಲೇ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಕಛೇರಿಗಳಿಗೆ ಭೇಟಿ ನೀಡಿ ಅಥವಾ ಸಹಾಯವಾಣಿ ಸಂಪರ್ಕಿಸಿ ಅಥವಾ ಈ ಕಛೇರಿಗಳಿಂದ ಏರ್ಪಡಿಸಲಾಗುವ ವಾರ್ಡ್‌ವಾರು ಕ್ಯಾಂಪ್‌ಗಳಿಗೆ ಭೇಟಿ ನೀಡಿ 'ಬಿ' ರಿಜಿಸ್ಟರ್‌ನಲ್ಲಿ ಇ-ಖಾತಾ ಪಡೆಯಲು ಅರ್ಜಿ ಸಲ್ಲಿಸಿ, ಸರ್ಕಾರ ನೀಡಿರುವ ಅವಕಾಶ ಸದುಪಯೋಗ ಪಡಿಸಿಕೊಳ್ಳಲು ಕರೆ ನೀಡಿದ್ದಾರೆ.

ಇ-ಖಾತಾಗೆ ಸಂಬಂಧಿಸಿದಂತೆ ಸಹಾಯವಾಣಿ ಸ್ಥಾಪಿಸಲಾಗಿದ್ದು, ಚಿತ್ರದುರ್ಗ ನಗರಸಭೆ-08194-222401, ಕೆ.ಕಿರಣ್ ಕುಮಾರ್-9606281164. ಚಳ್ಳಕೆರೆ ನಗರಸಭೆ-08195-200093, ಎಸ್.ವೀರಭದ್ರಪ್ಪ-8050551355. ಹಿರಿಯೂರು ನಗರಸಭ-08193-296220, ಮಲ್ಲಿಕಾರ್ಜುನ ಸ್ವಾಮಿ-9620287514. ಹೊಸದುರ್ಗ ಪುರಸಭೆ- 08199-295095, ಎನ್.ವಿನಯ್-9353833372. ಹೊಳಲ್ಕೆರೆ ಪುರಸಭೆ-08191-275861, ಎಂ.ದೇವರಾಜ್-9845912244. ಮೊಳಕಾಲ್ಮೂರು ಪಟ್ಟಣ ಪಂಚಾಯಿತಿ-08198-229044, ಎಲ್.ಹೆಚ್.ತಿಪ್ಪೇಸ್ವಾಮಿ-9845174196, ನಾಯಕನಹಟ್ಟಿ ಪಟ್ಟಣ ಪಂಚಾಯಿತಿ-08190-200232, ಆರ್.ಸಂದೀಪ್-9606307100 ಇವರನ್ನು ಸಂಪರ್ಕಿಸಬಹುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫಾಸ್ಟ್ ನ್ಯೂಸ್

### ಹಿರೇಕಬ್ಬಿಗೆರೆ ಗೊಲ್ಲರಹಟ್ಟಿ: ಮೌಢ್ಯತೆ, ಬಾಲ್ಯವಿವಾಹ ನಿಷೇಧ ಕುರಿತು ಜಾಗೃತಿ

» ಮೊದಲ ಪುಟದಿಂದ

ಜೆಂಡರ್ಸ್ ಸ್ಪೆಷಲಿಸ್ಟ್ ಡಿ.ಗೀತಾ ಮಾತನಾಡಿ, ಮೌಢ್ಯಾಚರಣೆ ತುಂಬಾ ಅನಿಷ್ಠ ಪದ್ಧತಿಯಾಗಿದ್ದು, ಈ ತರಹದ ಅನಿಷ್ಠ ಪದ್ಧತಿಗಳನ್ನು ಆಚರಣೆ ಮಾಡದಂತೆ ಶಾಲಾ ಮಕ್ಕಳಿಗೆ ಜಾಗೃತಿ ಮೂಡಿಸಿದರು. ಇಂತಹ ಪದ್ಧತಿಗಳನ್ನು ಆಚರಣೆ ಮಾಡಿದ್ದಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆ 1098ಕ್ಕೆ ಮತ್ತು ತುರ್ತು ಸಹಾಯವಾಣಿ ಸಂಖ್ಯೆ 112ಗೆ ಕರೆ ಮಾಡುವಂತೆ ಮಕ್ಕಳಿಗೆ ತಿಳಿಸಿದರು.

ಶಿಕ್ಷಣಕ್ಕೆ ಹೆಚ್ಚಿನ ಒಲವು ನೀಡಿ, ಸಮಾಜಕ್ಕೆ ಮಾದರಿ ಮಕ್ಕಳು ಆಗಬೇಕು. ಶಾಲೆಯ ಮಕ್ಕಳಿಗೆ ಮೌಢ್ಯ ಪದ್ಧತಿ ಮತ್ತು ಆಚರಣೆ ಕುರಿತು ಜಾಗೃತಿ ಮೂಡಿಸಿದರು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ಸುಧಾರಾಣಿ, ಎಸ್‌ಡಿಎಂಸಿ ಅಧ್ಯಕ್ಷೆ ಮಮತಾ, ಹಿರೇಕಬ್ಬಿಗೆರೆ ಗೊಲ್ಲರಹಟ್ಟಿಯ ಸರ್ಕಾರಿ ಪ್ರೌಢಶಾಲೆ ಮುಖ್ಯ ಶಿಕ್ಷಕ ಡಿ.ಮಂಜಣ್ಣ ಹಾಗೂ ಶಿಕ್ಷಕರು, ಅಂಗನವಾಡಿ ಕಾರ್ಯಕರ್ತೆಯರು, ಶಾಲಾ ಮಕ್ಕಳು ಇದ್ದರು.

### ಜಂಡಾಕಟ್ಟೆ: ಜೂಜಾಡುತ್ತಿದ್ದ 6 ಜನ ಹಾಗೂ ಹಣ ವಶ.

» ಚಳ್ಳಕೆರೆ

ನಗರದ ಸೋಮಗುದ್ದುರಸ್ತೆಯ ಜಂಡಾಕಟ್ಟೆ ಬಳಿ ಹಾಡುಹಗಲೇ ಜೂಜಾಟವಾಡುತ್ತಿದ್ದ ಓಬಣ್ಣ ಹಾಗೂ ಇತರೆ ಆರು ಜನರನ್ನು ವಶಕ್ಕೆ ಪಡೆದು ಅವರಿಂದ ಜೂಜಾಟದ ಹಣ 2120ರೂ ವಶಪಡಿಸಿಕೊಳ್ಳಲಾಗಿದೆ ಎಂದು ಪಿಎಸ್‌ಐ ಧರೆಪ್ಪಬಾಳಪ್ಪದೊಡ್ಡಮನಿ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ಸಾರ್ವಜನಿಕ ಮಾಹಿತಿಮೇರೆಗೆ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಪೇದೆ ಶಂಕರಣ್ಣ, ತಿಲಕ್‌ರಾಜ್, ಸುನೀಲ್ ಮತ್ತು ತಂಡ ದಾಳಿ ನಡೆಸಿ ಹಣ ಮತ್ತು ಆರೋಪಿಗಳನ್ನು ವಶಕ್ಕೆ ಪಡೆದಿದ್ದಾರೆ.

### ಅಯುಧದಿಂದ ಮಹಿಳೆಯ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿ ಬಂಗಾರದ ಒಡವೆ ದೋಚಿ ಪರಾರಿ

» ಹೊಸದುರ್ಗ

ಮಹಿಳೆಯೋರ್ವಳ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿ ಅಕೆಯ ಕಿವಿ ಹಾಗೂ ಕೋರಳಲಿದ್ದ ಒಡೆವೆಗಳನ್ನು ಮನಸ್ಸಿಗೆ ಬಂದಂತೆ ಕಿತ್ತುಕೊಂಡು ಮಾರಣಾಂತಿಕ ಹಲ್ಲೆ ನಡೆಸಿ ಪರಾರಿಯಾಗಿರುವ ಘಟನೆ ತಾಲೂಕಿನ ಶ್ರೀರಾಂಪುರ ಪೋಲಿಸ್ ಠಾಣಾ ವ್ಯಾಪ್ತಿಯ ಹೆಗ್ಗೆರೆ ಗ್ರಾಮದ ಹೊರವಲಯದ ಜಮೀನೊಂದರಲ್ಲಿ ಗುರುವಾರ ಸಂಭವಿಸಿದೆ.
ಹಲ್ಲೆಗೊಳಗಾಗಿರುವ ಮಹಿಳೆಯನ್ನು ಹೆಗ್ಗರೆ ಗ್ರಾಮದ ಲೇಟ್ ಮಲ್ಲೇಶಪ್ಪ ಎಂಬುವವರ ಪತ್ನಿ ಅಂಬಿಕಮ್ಮ ಎಂದು ತಿಳಿದು ಬಂದಿದ್ದು ಅಂಬಿಕಮ್ಮ ಎಂಬುವವರು ಗುರುವಾರ ಮಧ್ಯಾಹ್ನ ಸುಮಾರು 12 ಗಂಟೆಯ ಸಮಯದಲ್ಲಿ ಹೆಗ್ಗರೆ ಗ್ರಾಮದ ಹೊರವಲಯದಲ್ಲಿರುವ ಅವರ ಅಡಿಕೆ ತೋಟದಲ್ಲಿ ಕೆಲಸ ಮಾಡುತ್ತಿದ್ದ ಸಂಧರ್ಬದಲ್ಲಿ ಯಾರೋ ದುಷ್ಕರ್ಮಿ ಆಯುಧದಿಂದ ತಲೆಗೆ ಬಲವಾಗಿ ಒಡೆದು ಆಕೆಯ ಎರಡೂ ಕಿವಿಗಳನ್ನ ರಕ್ತ ಬರುವಂತೆ ಹರಿದು ಕಿವಿಯಲ್ಲಿದ್ದ 20 ಸಾವಿರ ಮೌಲ್ಯದ ಸುಮಾರು 5 ಗ್ರಾಂ ತೂಕದ ಬೆಂಡೋಲೆ, 50 ಸಾವಿರ ಮೌಲ್ಯದ ಬಂಗಾರದ ಚೈನ್ ಪೀಸ್ ಒಟ್ಟು 70 ಸಾವಿರ ಬೆಲೆಬಾಳುವ ಒಡೆವೆಗಳನ್ನು ಕಿತ್ತುಕೊಂಡು ಪರಾರಿಯಗಿದ್ದಾನೆ, ಜೋರಾಗಿ ಕಿರುಚಿದ ಶಬ್ದ ಕೇಳಿದಾಗ ಮತ್ತೊಂದು ತೋಟದಲ್ಲಿದ್ದವರು ಬಂದು ನೋಡುವಷ್ಟರಲ್ಲಿ ಕಿರಾತಕ ಪರಾರಿಯಾಗಿದ್ದ ಎನ್ನಲಾಗಿದ್ದು ಮಹಿಳೆಯ ಕಿವಿ ಮತ್ತು ಕುತ್ತಿಗೆಯಲ್ಲಿ ವಿಪರೀತಿ ರಕ್ತಶ್ರಾವವಾಗಿದ್ದು ಹಾಗೂ ಕಣ್ಣಿಗೆ ಬಲವಾಗಿ ಗುದ್ದಿದ್ದಾರೆ ಮಾತನಾಡುವ ಸ್ಥಿತಿಯಲ್ಲಿಲ್ಲದ ಗಾಯಾಳು ಮಹಿಳೆಯನ್ನು ಶ್ರೀರಾಂಪುರ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ ನಂತರ ಹೆಚ್ಚಿನ ಚಿಕಿತ್ಸೆಗಾಗಿ ತಿಪಟೂರು ಆಸ್ಪತ್ರೆಗೆ ದಾಖಲಿಸಲಾಗಿದ್ದು ಈ ಬಗ್ಗೆ ಶ್ರೀರಾಂಪುರ ಪೋಲಿಸ್ ಠಾಣೆಯಲ್ಲಿ ಪ್ರಕಟಣ ದಾಖಲಾಗಿದ್ದು ಪೋಲಿಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

### 5 ವರ್ಷಗಳವರೆಗೆ ಮಾಜಿ ವಾಯುಸೇನಾ ಯೋಧರ ವೈಯಕ್ತಿಕ ಕಡತಗಳ ಸಂರಕ್ಷಣೆ

» ದಾವಣಗೆರೆ

ನ್ಯಾಯಾಲಯದ ಪ್ರಕರಣಗಳಲ್ಲಿ ಭಾಗಿಯಾಗಿರುವ ಮಾಜಿ ವಾಯುಸೇನಾ ಯೋಧರ ವೈಯಕ್ತಿಕ ಕಡತಗಳನ್ನು ಹೊರತುಪಡಿಸಿ, ಬಾಕಿ ಮಾಜಿ ವಾಯುಸೇನಾ ಯೋಧರ ವೈಯಕ್ತಿಕ ಕಡತಗಳನ್ನು 25 ವರ್ಷಗಳ ಬದಲಾಗಿ ಕೇವಲ 5 ವರ್ಷಗಳು ಮಾತ್ರ ಸಂರಕ್ಷಿಸಲಾಗುವುದು. ತಮ್ಮ ವೈಯಕ್ತಿಕ ಕಡತಗಳ ಅವಶ್ಯಕತೆಯಿದ್ದರೆ ಜುಲೈ 10 ರೊಳಗಾಗಿ ವಾಯುಪಡೆ ದಾಖಲಾತಿ ಕಚೇರಿ ನವದೆಹಲಿ ದೂ.ಸಂ: 011-25687194, 5760, ಫ್ಯಾಕ್ಸ್ ಸಂ:011-25696552 ನ್ನು ಸಂಪರ್ಕಿಸಿ ದಾಖಲೆ ಪಡೆದುಕೊಳ್ಳುವಂತೆ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪನಿರ್ದೇಶಕ ಡಾ.ಸಿ.ಎ ಹಿರೇಮಠ ತಿಳಿಸಿದ್ದಾರೆ.

#### ಮೈಕ್ರೋ ಫೈನಾನ್ಸ್, ಎನ್‌ಬಿಎಫ್‌ಸಿ, ಲೇವಾದೇವಿ, ಗಿರಿವಿದಾರರೊಂದಿಗೆ ಸಭೆ

# ಕಾನೂನು ಚೌಕಟ್ಟಲ್ಲಿ ವ್ಯವಹರಿಸಿ, ಸಾಲ ಕಟ್ಟಿಸಲು ಬಲವಂತದ ಕ್ರಮಕ್ಕೆ ಕಾನೂನಿನಲ್ಲಿ ಅವಕಾಶವಿಲ್ಲ; ಡಿಸಿ

» ದಾವಣಗೆರೆ

ಆರ್ಥಿಕಾಭಿವೃದ್ಧಿಗೆ ಮೈಕ್ರೋ ಫೈನಾನ್ಸ್, ಬ್ಯಾಂಕೇತರ ಹಣಕಾಸು ಸಂಸ್ಥೆಗಳು ಮತ್ತು ಲೇವಾದೇವಿ, ಗಿರಿವಿದಾರರ ಕೊಡುಗೆ ಇದ್ದು ನಿಯಮಬದ್ದವಾಗಿ ವ್ಯವಹಾರ ಮಾಡಿ, ಆದರೆ ಸಾಲಕಟ್ಟಿಸಿಕೊಳ್ಳುವಾಗ ಬಲವಂತದ ಕ್ರಮಕ್ಕೆ ಮುಂದಾಗದೇ ನಿಯಮಬದ್ದವಾಗಿ ವ್ಯವಹರಿಸಬೇಕೆಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಸೂಚನೆ ನೀಡಿದರು.

ಅವರು ಶುಕ್ರವಾರ ಜಿಲ್ಲಾ ಪೊಲೀಸ್ ಅಧೀಕ್ಷಕರ ಕಚೇರಿಯಲ್ಲಿ ನಡೆದ ಮೈಕ್ರೋ ಫೈನಾನ್ಸ್, ಬ್ಯಾಂಕೇತರ ಹಣಕಾಸು ಸಂಸ್ಥೆಗಳು ಮತ್ತು ಲೇವಾದೇವಿ ಹಾಗೂ ಗಿರಿವಿದಾರರೊಂದಿಗೆ ನಡೆದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಫೈನಾನ್ಸ್ ಮತ್ತು ಎನ್ ಬಿಎಫ್‌ಸಿ ಹಣಕಾಸು ಸಂಸ್ಥೆಯವರು ಗ್ರಾಮಾಂತರ ಪ್ರದೇಶ ಸೇರಿದಂತೆ ನಗರ ಪ್ರದೇಶದಲ್ಲಿ ಸಾಲವನ್ನು ನೀಡಿವೆ. ಆದರೆ ಸಾಲ ವಸೂಲಾತಿಯಲ್ಲಿ ನಿಯಮ ಮೀರಿ ಘಾಸಿಯಾಗುವಂತೆ ವಸೂಲಾತಿ ಮಾಡಿದ್ದರಿಂದ ಮನಃನೊಂದು ಆತ್ಮಹತ್ಯೆ ಪ್ರಕರಣಗಳು ರಾಜ್ಯದಲ್ಲಿ ಕಂಡು ಬಂದಿದ್ದರಿಂದ ಅಮಾನವೀಯ ಕ್ರಮಗಳ ನಿಯಂತ್ರಣಕ್ಕಾಗಿ ಸರ್ಕಾರ ಸುಗ್ರೀವಾಜ್ಞೆಯನ್ನು ಜಾರಿಗೊಳಿಸಿದೆ.

ಕಾಯ್ದೆಯನ್ವಯ ಎಲ್ಲಾ ಹಣಕಾಸು ಸಂಸ್ಥೆಯವರು ಮಾರ್ಚ್ 12 ರೊಳಗಾಗಿ ಆಯಾ ಜಿಲ್ಲಾಧಿಕಾರಿಗಳಿಂದ ನೊಂದಣಿ ಮಾಡಿಸಿಕೊಂಡು ನಿಯಮಬದ್ದವಾಗಿ ವ್ಯವಹಾರ ಮಾಡಲು ಆದೇಶ ಮಾಡಲಾಗಿದೆ. ಈ ಸುಗ್ರೀವಾಜ್ಞೆ ಎಲ್ಲಾ





ಫೈನಾನ್ಸ್ ಸಂಸ್ಥೆಯವರಿಗೆ ಮಾಹಿತಿ ಇದ್ದು ನೊಂದಣಿಗೆ ಮುಂದಾಗಬೇಕೆಂದು ಸೂಚನೆ ನೀಡಿದರು.

ಹೊಸ ಕಾಯ್ದೆಯಡಿ ಸಾಲ ನೀಡಿಕೆಯ ಎಲ್ಲಾ ಒಡಂಬಡಿಕೆ ಪತ್ರಗಳನ್ನು ಸ್ಥಳೀಯ ಭಾಷೆ ಕನ್ನಡದಲ್ಲಿ ಮುದ್ರಣ ಮಾಡಿ ಎಲ್ಲಾ ಷರತ್ತುಗಳ ಸಂಪೂರ್ಣ ವಿವರ ಸಾಲ ಪಡೆಯುವವರಿಗೆ ಮಾಹಿತಿ ನೀಡಬೇಕು. ಸಾಮರ್ಥ್ಯವನ್ನಾಧರಿಸಿ ಸಾಲ ನೀಡಬೇಕು, ಫೈನಾನ್ಸ್ ನವರು ಯಾವುದೇ ಅಡಮಾನಗಳನ್ನು ಪಡೆಯದೇ ಸಾಲ ನೀಡಬೇಕು, ಸಾಲ ಪಡೆಯುವಾಗ ಅನೇಕ ಸಹಿಯನ್ನು ಪಡೆಯುವುದು, ಸಾಲ ತೀರಿಸಿದ್ದರೂ ಇನ್ನೂ ಕಂತುಗಳು ಬಾಕಿ ಇವೆ, ಸಾಲ ಕಟ್ಟದಿದ್ದಾಗ ಅವರ ಮನೆ ಬಾಗಿಲಿಗೆ ತೆರಳಿ ಅವಾಚ್ಯ ಶಬ್ದಗಳಿಂದ ನಿಂದಿಸುವುದು ಕಾನೂನಿನಲ್ಲಿ ಅವಕಾಶ ಇಲ್ಲ ಎಂದರು.

ನಾನ್ ಬ್ಯಾಂಕಿಂಗ್ ಹಣಕಾಸು ಸಂಸ್ಥೆಯವರು ವಾಹನಗಳ ಮೇಲೆ ಸಾಲ ನೀಡಿ ಅವರು ಒಂದು ಕಂತು ಕಟ್ಟಲು ವಿಫಲವಾದರೂ ವಾಹನ ವಶಕ್ಕೆ ಪಡೆದು ಬೇರೆಯವರಿಗೆ ಮಾರಾಟ ಮಾಡಿರುವ ಅನೇಕ ಪ್ರಕರಣಗಳಿವೆ.

ಆದರೆ ಯಾವುದೇ ಸಂಸ್ಥೆಗಳಿಗೆ ಸೀಜ್ ಮಾಡುವ ಅಧಿಕಾರ ಇಲ್ಲ, ನ್ಯಾಯಾಲಯದ ಮೂಲಕ ಮುಟ್ಟುಗೋಲಿಗೆ ಆದೇಶ ಪಡೆದ ನಂತರವೇ ಅಂತಹ ವಾಹನಗಳನ್ನು ಮುಟ್ಟುಗೋಲು ಹಾಕಿ ಹರಾಜು ಮೂಲಕ ವಿಲೆ ಮಾಡಬಹುದು. ಓರ್ವ ಸಂಸ್ಥೆ ಟ್ರ್ಯಾಕ್ಟರ್‌ಗೆ ಸಾಲ ನೀಡಿದ್ದು ರೈತ 7 ಲಕ್ಷದಲ್ಲಿ 5 ಲಕ್ಷ ಸಾಲವನ್ನು ಮರುಪಾವತಿಸಿದ್ದರೂ ಅದನ್ನು ವಶಕ್ಕೆ ಪಡೆದು ಬೇರೆಯವರಿಗೆ ಮಾರಾಟ ಮಾಡಿದ ಪ್ರಕರಣ ದಾವಣಗೆರೆಯಲ್ಲಿ ಕಂಡುಬಂದಿದೆ. ಆ ಸಂಸ್ಥೆಯಿಂದಲೇ ರೈತನಿಗೆ ಟ್ರ್ಯಾಕ್ಟರ್ ಕೊಡಿಸುವ ಕೆಲಸವನ್ನು ಮಾಡಲಾಗುತ್ತದೆ ಎಂದ ಅವರು ಯಾವುದೇ ಹಣಕಾಸು ಸಂಸ್ಥೆಯಾಗಿರಲಿ, ಈ ಜಿಲ್ಲೆಯಲ್ಲಿ ವ್ಯವಹರಿಸುತ್ತಿದ್ದಲ್ಲಿ ಪ್ರಾದೇಶಿಕ ಕಚೇರಿ ಹೊಂದುವುದು ಕಡ್ಡಾಯವಾಗಿದೆ ಎಂದರು.

ಸಾಲಗಾರರಿಗೆ ಕಿರುಕುಳ, ಮಾನಸಿಕ ಒತ್ತಡ ನೀಡಿದಲ್ಲಿ ಪೊಲೀಸ್ ಉಪ ಅಧೀಕ್ಷಕರ ಮೂಲಕ ಸುಮೋಟೋ ಪ್ರಕರಣ ದಾಖಲಿಸುವ ಅಧಿಕಾರ ಕಾಯಿದೆಯಲ್ಲಿದೆ. ತಪ್ಪಿತಸ್ಥರೆಂದು ಕಂಡುಬಂದಲ್ಲಿ 10 ವರ್ಷಗಳವರೆಗೆ ಜೈಲು ಶಿಕ್ಷೆ ಹಾಗೂ ದಂಡವಿರುತ್ತದೆ. ಒಂದು ವೇಳೆ ಸಾಲ ವಸೂಲಾತಿಯಾಗುತ್ತಿಲ್ಲವೆಂದರೆ ಅದನ್ನು ಸಂಸ್ಥೆಯ ಕಾನೂನು ಚೌಕಟ್ಟಿನಲ್ಲಿ ವಸೂಲಾತಿಗೆ ಕ್ರಮ ವಹಿಸಬೇಕು, ಮಾನಸಿಕ, ದೈಹಿಕ ಹಿಂಸೆಗೆ ಅವಕಾಶವಿಲ್ಲ ಎಂದರು.

ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ಮಾತನಾಡಿ ಸುಗ್ರೀವಾಜ್ಞೆಯಲ್ಲಿ ಬಹಳ ಕಟ್ಟುನಿಟ್ಟಿನ ನಿಯಮಗಳನ್ನು ಜಾರಿಗೆ ತರಲಾಗಿದೆ. ನಿಯಮಬದ್ಧ ಹಾಗೂ ಪಾರದರ್ಶಕವಾಗಿ ವ್ಯವಹಾರ ಮಾಡಲು ಯಾವುದೇ ಸಮಸ್ಯೆ ಇರುವುದಿಲ್ಲ. ಆದರೆ ನಿಯಮ ಮೀರಿ ವಸೂಲಾತಿ ಕ್ರಮ ಕೈಗೊಳ್ಳುವಂತಿಲ್ಲ, ಹೊಸ ಕಾನೂನಿನ ಅವಕಾಶಗಳ ದುರ್ಬಳಕೆ ಮಾಡಿಕೊಂಡಲ್ಲಿ ಫೈನಾನ್ಸ್ ಸಂಸ್ಥೆಯವರು ಸಹ ಹತ್ತಿರದ ಠಾಣೆಗೆ ಮಾಹಿತಿ ನೀಡಬಹುದಾಗಿದೆ ಎಂದರು.

ಸಭೆಯಲ್ಲಿ ಸಹಕಾರ ಸಂಘಗಳ ಉಪನಿಬಂಧಕರಾದ ಮಧು ಶ್ರೀನಿವಾಸ್ ಲೇವಾದೇವಿ, ಗಿರಿವಿದಾರರ ಮತ್ತು ಚಿಟ್ಸ್ ಫಂಡ್‌ಗಳ ವ್ಯವಹಾರದ ಬಗ್ಗೆ ಮತ್ತು ನಿಯಮಗಳ ಬಗ್ಗೆ ಮಾತನಾಡಿದರು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ವಿಜಯಕುಮಾರ್ ಎಂ.ಸಂತೋಷ್, ಮಂಜುನಾಥ್ ಹಾಗೂ ಫೈನಾನ್ಸ್ ಸಂಸ್ಥೆಯವರು ಉಪಸ್ಥಿತರಿದ್ದರು.

#### ನಾಟ್ಯೋಲ್ಲಾಸ ಭರತನಾಟ್ಯ ಕಾರ್ಯಕ್ರಮದಲ್ಲಿ ಪಂಡಿತಾರಾಧ್ಯಶ್ರೀಗಳ ಕಿವಿ ಮಾತು

# ಚಿಕ್ಕಂದಿನಿಂದಲೆ ಮಕ್ಕಳಿಗೆ ಸಾಹಿತ್ಯ ಸಂಸ್ಕೃತಿಯ ಬಗ್ಗೆ ಪರಿಚಯ ಮಾಡಿಕೊಡುವ ಕೆಲಸವಾಗಬೇಕು

» ಹೊಸದುರ್ಗ

ನಿಮ್ಮ ಮಕ್ಕಳು ಭರತನಾಟ್ಯ ಕಲೆಯನ್ನ ಕಲಿಯುವ ಹಾಗೆ ಮಕ್ಕಳನ್ನ ಪ್ರೋತ್ಸಹಿಸಿ ಚಿಕ್ಕಂದಿನಿಂದಲೆ ಮಕ್ಕಳಿಗೆ ಕಲೆಯ ಬಗ್ಗೆ ಅಭಿರುಚಿ ಬೆಳಸಬೇಕು ಸಾಹಿತ್ಯ ಸಂಸ್ಕೃತಿಯ ಬಗ್ಗೆ ಪರಿಚಯ ಮಾಡಿಕೊಡುವ ಕೆಲಸವಾಗಬೇಕು ಎಂದು ಸಾಣೇಹಳ್ಳಿಯ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಕರೆ ನೀಡಿದರು.

ಪಟ್ಟಣದ ಅಶೋಕ ರಂಗ ಮಂದಿರದಲ್ಲಿ ವಿದ್ವಾನ್ ನಾಗರಾಜ್ ಕೆ. ಅವರ ನೇತೃತ್ವದಲ್ಲಿ ಆಯೋಜಿಸಲಾಗಿದ್ದ ನಾಟ್ಯೋಲ್ಲಾಸ ಭರತನಾಟ್ಯ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಸಾಹಿತ್ಯ, ಸಂಗೀತ ಮತ್ತು ಕಲೆ ಇವುಗಳ ಒಲವು ಇಲ್ಲದಂತಹ ವ್ಯಕ್ತಿ ಬಾಲ ಮತ್ತು ಕೊಂಬು ಇಲ್ಲದಂತಹ ಪಶು ಇದ್ದ ಹಾಗೆ, ಈ ಒಂದು ನೆಲೆಯಲ್ಲಿ ನಾಗರಾಜ್ ಅವರು ಗ್ರಾಮೀಣ ಪ್ರದೇಶಕ್ಕೆ ಬಂದು ಗ್ರಾಮೀಣ ಪ್ರದೇಶದ ಮಕ್ಕಳಿಗೆ ಭರತ ನಾಟ್ಯವನ್ನ ಅತ್ಯಂತ ಕಡಿಮೆ ಖರ್ಚಿನಲ್ಲಿ ಕಲಿಸಿಕೊಡುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತ ಪಡಿಸಿದ ಶ್ರೀಗಳು ಇವರು ಸಾಣೇಹಳ್ಳಿಯಲ್ಲೂ ಕೂಡ ಮಕ್ಕಳಿಗೆ ಭರತ ನಾಟ್ಯವನ್ನ ಕಲಿಸಿಕೊಡುತ್ತಿದ್ದಾರೆ.ಇಂಥವರು ಬೆಂಗಳೂರಿನಲ್ಲಿ ಇದ್ದಿದ್ದರೆ ಸಾಕಷ್ಟು ಹಣ ಗಳಿಸಬಹುದಿತ್ತು ಆದರೆ ನಾಗರಾಜ್ ಅವರಿಗೆ ದುಡಿಮೆಗಿಂತ ಹೆಚ್ಚಾಗಿ



ಗ್ರಾಮೀಣ ಪ್ರದೇಶದ ನಮ್ಮ ಮಕ್ಕಳು ಕಲೆಯನ್ನ ಕಲಿಯಬೇಕು ಯಾರಿಗಿಂತ ಕಡಿಮೆ ಇಲ್ಲ ಎಂಬ ಭಾವನೆ ಮಕ್ಕಳಲ್ಲಿ ಬರಬೇಕು ಎಂಬ ಇಚ್ಛಾ ಶಕ್ತಿಯನ್ನು ಇಟ್ಟುಕೊಂಡು ಭರತ ನಾಟ್ಯವನ್ನ ಹೇಳಿಕೊಡುತ್ತಿರುವುದು ಅತ್ಯಂತ ಶ್ಲಾಘನೀಯ ಪೋಷಕರು ಕೂಡ ಇಂತಹ ಕಲೆಗೆ ಪ್ರೋತ್ಸಹವನ್ನ ನೀಡಿಬೇಕು ಎಂದ ಶ್ರೀಗಳು ಇಂತಹ ಕಲೆಗಳಿಗೆ ಸಾರ್ವಜನಿಕರು ಆರ್ಥಿಕವಾಗಿ ಸುಸ್ಥಿತಿಯಲ್ಲಿ

ಇರುವಂತಹವರು ಇಂತಹ ಕಲೆಗೆ ಪ್ರೋತ್ಸಹ ನೀಡಿದರೆ ಗ್ರಾಮೀಣ ಪ್ರದೇಶಗಳಲ್ಲಿ ಇಂತಹ ಕಲೆಯನ್ನ ಇನ್ನು ಬೆಳೆಸಲು ಸಾಧ್ಯ ಎಂದರು.

ಉಚ್ಚ ನ್ಯಾಯಲಯದ ವಿಶ್ರಾಂತ ನ್ಯಾಯಮೂರ್ತಿ ಹೆಚ್.ಬಿಲ್ಲಪ್ಪ ಕಾರ್ಯಕ್ರಮವನ್ನ ಉದ್ಘಾಟಿಸಿ ಮಾತನಾಡಿದರು.

ಬ್ರಹ್ಮವಿದ್ಯಾನಗರದ ಭಗೀರಥ ಪೀಠದ ಶ್ರೀ ಪುರುಷೋತ್ತಮಾನಮದಪುರಿ ಸ್ವಾಮೀಜಿ,ಕುಂಚಿಟಿಗ ಮಹಸಂಸ್ಥಾನದ ಶ್ರೀ ಶಾಂತವೀರಸ್ವಾಮೀಜಿ, ಕನಕ ಗುರುಪೀಠದ ಶ್ರೀ ಈಶ್ವರಾನಂದಪುರಿ ಸ್ವಾಮೀಜಿ ಆಶೀರ್ಚವನ ನೀಡಿದರು.

### ಬಸವೇಶ್ವರ ಆಂಗ್ಲಮಾಧ್ಯಮ ಶಾಲೆಯಲ್ಲಿ ಮಾತೃಭೋಜನಾ



» ಚಳ್ಳಕೆರೆ

ಪ್ರತಿಯೊಬ್ಬ ತಾಯಿಯೂ ತನ್ನ ಮಕ್ಕಳ ಶ್ರೇಯೋಭಿವೃದ್ಧಿ ಬಗ್ಗೆ ಆಶಾಭಾವನೆಯನ್ನು ಹೊಂದಿರುತ್ತಾರೆ. ಮಕ್ಕಳು ಉತ್ತಮ ವಿದ್ಯಾಭ್ಯಾಸ ಮಾಡಿ ಸಮಾಜಕ್ಕೆ ಮಾದರಿಯಾಗಬೇಕೆಂಬ ತುಡಿತ ಅವರನ್ನು ಸದಾ ಕಾಡುತ್ತದೆ. ಮಕ್ಕಳಿಗೆ ಅಮ್ಮನೆಂದರೆ ಎಷ್ಟುಪ್ರೀತಿಯೋ ಅಷ್ಟೇ ಪ್ರೀತಿ ಅಮ್ಮನಿಗೂ ಮಕ್ಕಳ ಮೇಲಿರುತ್ತದೆ. ಇಂತಹ ಮಧುರಬಾಂದವ್ಯವನ್ನು ಬೆಸೆಯಲು ಶಾಲೆಯಲ್ಲಿ ಮಾತೃಭೋಜನಾ ಕಾರ್ಯಕ್ರಮದ ಮೂಲಕ ಮಕ್ಕಳಲ್ಲಿ ವಿಶ್ವಾಸ ತುಂಬಲಾಗುತ್ತಿದೆ ಎಂದು ಬಸವೇಶ್ವರ ವಿದ್ಯಾಸಂಸ್ಥೆ ಕಾರ್ಯದರ್ಶಿ ಕೋಟೆಜಯಣ್ಣ ತಿಳಿಸಿದರು.

ಅವರು, ಶುಕ್ರವಾರ ತಮ್ಮ ಸಂಸ್ಥೆಯ ಬಸವೇಶ್ವರ ಆಂಗ್ಲಮಾಧ್ಯಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಮಾತೃಭೋಜನಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಶಾಲೆಯ ಮಕ್ಕಳ ತಾಯಂದಿರು ಆಗಮಿಸಿ ಮಕ್ಕಳಿಗೆ ಕೈತುತ್ತು ನೀಡುವ ಮೂಲಕ ಸಂತಸವನ್ನು ಹಂಚಿಕೊಂಡರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆ ಅಧ್ಯಕ್ಷ ವಿ.ಮಂಜುನಾಥ ಮಾತನಾಡಿ, ಶಾಲೆಯಲ್ಲಿ ಇಂತಹ ಕಾರ್ಯಕ್ರಮಗಳು ಮಕ್ಕಳಲ್ಲಿ ಹೆಚ್ಚು ಆತ್ಮವಿಶ್ವಾಸವನ್ನು ಉಂಟುಮಾಡಲು ಯಶಸ್ವಿಯಾಗಿವೆ. ತಾಯಂದಿರೂ ಸಹ ತಮ್ಮ ಮಕ್ಕಳ ವಿದ್ಯಾಭ್ಯಾಸ ಬಗ್ಗೆ ಶಿಕ್ಷಕರೊಂದಿಗೆ ಚರ್ಚಿಸುವ ಅವಕಾಶವನ್ನು ಈ ಮೂಲಕ ನೀಡಲಾಗುತ್ತದೆ ಎಂದರು.

## ಪ್ರಮುಖ ಸುದ್ದಿ

# ದೇಶಾಭಿಮಾನ, ದೇಶಭಕ್ತಿಯನ್ನು ಇಂದಿನ ಮಕ್ಕಳು ಬೆಳೆಸಿಕೊಳ್ಳಬೇಕು

» ಚಿತ್ರದುರ್ಗ

ದೇಶಾಭಿಮಾನ, ದೇಶಭಕ್ತಿಯನ್ನು ಇಂದಿನ ಮಕ್ಕಳು ಬೆಳೆಸಿಕೊಳ್ಳಬೇಕೆಂದು ಗುಲ್ಬರ್ಗದ ಸಿದ್ದಬಸವ ಸ್ವಾಮೀಜಿ ಕರೆ ನೀಡಿದರು.

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ಜಿಲ್ಲಾ ಸಂಸ್ಥೆಯಿಂದ ಮುರುಘಾಮಠದಲ್ಲಿ ಶುಕ್ರವಾರದಿಂದ ಮೂರು ದಿನಗಳ ಕಾಲ ನಡೆಯುವ ರಾಜ್ಯ ಮಟ್ಟದ ಐತಿಹಾಸಿಕ ಸ್ಥಳಗಳ ಪರಿಚಯ ಮತ್ತು ವೀಕ್ಷಣಾ ಶಿಬಿರ ಉದ್ಘಾಟಿಸಿ ಮಾತನಾಡಿದರು.

ವೀರವನಿತೆ ಒನಕೆ ಓಬವ್ವ ಪ್ರಾಣವನ್ನು ಲೆಕ್ಕಿಸದೆ ಒನಕೆಯಿಂದ ಶತ್ರುಗಳನ್ನು ಸದೆ ಬಡಿದು ಐತಿಹಾಸಿಕ ಚಿತ್ರದುರ್ಗದ ಕೋಟೆಯನ್ನು ರಕ್ಷಿಸಿದಳು. ಅಂತಹ ಕೆಚ್ಚದೆ ಛಲ ಬಿಚ್ಚುಗತ್ತಿ ಭರಮಣ್ಣನಾಯಕನಲ್ಲಿದ್ದ ಶೌರ್ಯ ನಿಮ್ಮಲ್ಲಿ ಮೂಡಬೇಕು. ರಾಜಮಹಾರಾಜರು, ಪಾಳೆಯಗಾರರು ಆಳಿದ ಚಿತ್ರದುರ್ಗಕ್ಕೆ ತನ್ನದೆ ಆದ ಇತಿಹಾಸವಿದೆ. ಶೌರ್ಯ ಪರಾಕ್ರಮಕ್ಕೆ ಹೆಸರುವಾಸಿಯಾದುದು. ಬೇರೆ ಬೇರೆ ಜಿಲ್ಲೆಗಳಿಂದ ಆಗಮಿಸಿರುವ ನೀವುಗಳು ಇಲ್ಲಿನ ಇತಿಹಾಸ ತಿಳಿದುಕೊಳ್ಳಬೇಕೆಂದು ಸ್ಕೌಟ್ಸ್ ಮತ್ತು ಗೈಡ್ಸ್ ಮಕ್ಕಳಿಗೆ ತಿಳಿಸಿದರು.

ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯಿಂದ ಶಿಸ್ತು, ಆತ್ಮಬಲವನ್ನು ಬೆಳೆಸಿಕೊಂಡು ಉತ್ತಮ ಆರೋಗ್ಯ ಕಾಪಾಡಿಕೊಳ್ಳಿ ಎಂದರು.



ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆ ಮುಖ್ಯ ಆಯುಕ್ತ ಕೆ.ರವಿಶಂಕರ್‌ರೆಡ್ಡಿ ಮಾತನಾಡಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯಿಂದ ದೇಶ ಕಟ್ಟುವ ನಾಯಕತ್ವ ಬೆಳೆಯುತ್ತದೆ.

ಭಾರತದಭವ್ಯಭವಿಷ್ಯಯುವಜನಾಂಗದ ಮೇಲೆ ನಿಂತಿದೆ. ಶಿಕ್ಷಣದ ಜೊತೆ ಇಂತಹ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುವುದರಿಂದ ಬದುಕುವ ಕೌಶಲ್ಯ ಕಲಿಯಬಹುದು. ಇಂದಿನ ಮಕ್ಕಳಲ್ಲಿ ಮೌಲ್ಯ, ಸಿದ್ದಾಂತಗಳು ಮಾಯವಾಗುತ್ತಿರುವುದು ನೋವಿನ ಸಂಗತಿ ಎಂದು ಬೇಸರ ವ್ಯಕ್ತಪಡಿಸಿದರು.

ಸಾಮಾಜಿಕ ಜಾಲತಾಣ, ಮೊಬೈಲ್‌ಗಳ ಗೀಳಿನಿಂದ ಯುವ ಪೀಳಿಗೆ ಹೊರ ಬರಬೇಕಿದೆ. ಮೊಬೈಲನ್ನು ಒಳ್ಳೆಯದಕ್ಕಷ್ಟೆ ಬಳಸಿಕೊಳ್ಳಬೇಕು. ಗುರು-ಹಿರಿಯರನ್ನು ಗೌರವಿಸುವ ಸಂಸ್ಕಾರ ಕಲಿಯಿರಿ. ವಯಸ್ಸಾದ ತಂದೆ-ತಾಯಿಗಳನ್ನು ವೃದ್ದಾಶ್ರಮಕ್ಕೆ ಸೇರಿಸುವ ಪದ್ದತಿ ಒಳ್ಳಯದಲ್ಲ. ಜೀವನದಲ್ಲಿ ಏನಾದರೂ ಸ್ಪಷ್ಟ ಗುರಿಯಿದ್ದಾಗ ಮಾತ್ರ ಸಾಧನೆ ಮಾಡಲು ಸಾಧ್ಯ. ಪಠ್ಯಪುಸ್ತಕದ ಜೊತೆ ಕೌಶಲ್ಯ ಶಿಕ್ಷಣವನ್ನು ಕಲಿತಾಗ ಸ್ವಾವಲಂಭಿಗಳಾಗಿ ಬದುಕಬಹುದು ಎಂದು ಮಕ್ಕಳಿಗೆ ಕಿವಿಮಾತು ಹೇಳಿದರು.


ಗುರುಮಠಕಲ್‌ನ ಶಾಂತವೀರಸ್ವಾಮೀಜಿ ಸಾನಿಧ್ಯ ವಹಿಸಿ ಆಶೀರ್ವಚನ ನೀಡುತ್ತ ಏಳುಸುತ್ತಿನ ಕಲ್ಲಿನಕೋಟೆಯಿರುವ ಚಿತ್ರದುರ್ಗ ಐತಿಹಾಸಿಕವಾಗಿ ಪ್ರಸಿದ್ದಿ ಪಡೆದಿದೆ. ಮುರುಘಾಮಠಕ್ಕೆ ಮುನ್ನೂರು ನಾಲ್ಕು ನೂರು ವರ್ಷಗಳ ರಾಜಪರಂಪರೆಯ ಇತಿಹಾಸವಿದೆ. ಐತಿಹಾಸಿಕ, ಚಾರಿತ್ರಿಕ, ಧಾರ್ಮಿಕ ಸ್ಥಳಗಳಿಗೆ ಜಿಲ್ಲೆ ಹೆಸರುವಾಸಿ. ಮೂರು ದಿನಗಳ ಕಾಲ ತರಬೇತಿ ಪಡೆಯುವ ನೀವುಗಳನ್ನು ಇಲ್ಲಿನ ಇತಿಹಾಸವನ್ನು ತಿಳಿದುಕೊಳ್ಳಿ ಎಂದರು.

ಶಿಸ್ತು ಮತ್ತು ಸಮಯ ಪಾಲನೆಗೆ ಹೆಸರುವಾಸಿಯಾಗಿರುವ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯಲ್ಲಿ ಸೇರುವುದು ಒಂದು ಸುವರ್ಣಾವಕಾಶ. ಉತ್ತಮ ನಾಗರೀಕರಾಗಿ ಸಮಾಜದಲ್ಲಿ ಹೊರ ಹೊಮ್ಮಬೇಕಾದರೆ ಇಂತಹ ಸಂಸ್ಥೆಗಳಲ್ಲಿ ಮೊದಲು ಸೇವೆ ಸಲ್ಲಿಸಬೇಕು. ಸಮಯ ಅತ್ಯಂತ ಅಮೂಲ್ಯವಾದುದು. ಯಾರನ್ನು ಕಾಯುವುದಿಲ್ಲ. ಹಾಗಾಗಿ ಸಮಯಕ್ಕೆ ಹೆಚ್ಚಿನ ಮಹತ್ವ ಕೊಡಿ ಎಂದು ಸ್ಕೌಟ್ ಮತ್ತು ಗೈಡ್ಸ್ ಮಕ್ಕಳಿಗೆ ತಿಳಿಸಿದರು.


ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆ ಉಪಾಧ್ಯಕ್ಷ ಜಿ.ಎಸ್.ಉಜ್ಜಿನಪ್ಪ ಅಧ್ಯಕ್ಷತೆ ವಹಿಸಿದ್ದರು.

ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆ ಕಾರ್ಯದರ್ಶಿ ಬಿ.ಎ.ಲಿಂಗಾರೆಡ್ಡಿ, ಜಿಲ್ಲಾ ಸ್ಥಾನಿಕ ಆಯುಕ್ತರುಗಳಾದ ಎಂ.ಕೆ. ಅನಂತರೆಡ್ಡಿ, ಪಿ.ವೈ.ದೇವರಾಜ್‌ಪ್ರಸಾದ್, ರೋವರ್ಸ್‌ಶಿಬಿರದನಾಯಕಟಿ.ಎಸ್.ಶಿವಣ್ಣ, ರೇಂಜರ್ಸ್ ಶಿಬಿರದ ನಾಯಕಿ ಅಶ್ವಿನಿ ಆರ್.ಎಲ್. ರೇಂಜರ್ಸ್ ಜಿಲ್ಲಾ ನೋಡಲ್ ಅಧಿಕಾರಿ ಡಾ.ಕೆ.ಲೀಲಾವತಿ, ರೋವರ್ಸ್ ಜಿಲ್ಲಾ ನೋಡಲ್ ಅಧಿಕಾರಿ ಹೆಚ್. ತಿಪ್ಪೇಸ್ವಾಮಿ ವೇದಿಕೆಯಲ್ಲಿದ್ದರು.





# ವಿಶ್ವದ ಬಗ್ಗೆ ಹೊಸ ಸೃಷ್ಟಿ ನೀಡಿದ ಗೆಲಿಲಿಯೋ




■ ಲೇಖನ
ಎಚ್.ಎಸ್.ಟಿ.ಸ್ವಾಮಿ
ಹವ್ಯಾಸಿ ಖಗೋಳ ವೀಕ್ಷಕರು, ಚಿತ್ರದುರ್ಗ.
94485 65534

ಕ್ರಿ. ಶ. 1564 ರ ಫೆಬ್ರವರಿ 15 ರಂದು ಇಟಲಿಯ ಪೀಸಾ ನಗರದಲ್ಲಿ ಗೆಲಿಲಿಯೋ ಜನಿಸಿದರು. ಗೆಲಿಲಿಯೋಗಿಂತಲೂ ಮುಂಚೆ ಕೊಪರ್ನಿಕಸ್ ಸೂರ್ಯಕೇಂದ್ರ ಸಿದ್ಧಾಂತದ ಬಗ್ಗೆ ವಿವರಿಸಿದ್ದನು. ಆದರೆ ಈ ವಿಷಯವನ್ನು ಅವನು ಪುಸ್ತಕ ರೂಪದಲ್ಲಿ ಪ್ರಕಟಿಸುವಧೈರ್ಯ ಮಾಡಲಿಲ್ಲ. ಗೆಲಿಲಿಯೋ ಮೊಟ್ಟಮೊದಲ ಬಾರಿಗೆ ಭೂಮಿ ಸೂರ್ಯನ ಸುತ್ತ ಸುತ್ತುತ್ತಿದೆ ಎಂಬುವುದನ್ನು ಸಾರಿದನಲ್ಲದೆ ಪುಸ್ತಕದ ರೂಪದಲ್ಲಿಯೂ ಪ್ರಕಟಿಸಿದನು. ನಿಜ, ಅನಂತ ವಿಸ್ಮಯಗಳ ಆಗರವಾದ ವಿಶ್ವ ಅತ್ಯಂತ ರೋಚಕವಾದರೆ, ಇಂತಹ ವಿಸ್ಮಯಗಳನ್ನು ಅನಾವರಣ ಮಾಡುವ ಖಗೋಳ ವಿಜ್ಞಾನ ಇನ್ನಷ್ಟು ರೋಚಕವಾಗಿದೆ. ಇಂದು ಗೆಲಿಲಿಯೋನ ಹುಟ್ಟು ಹಬ್ಬ. ಈ ಸಂದರ್ಭದಲ್ಲಿ ಆತನನ್ನು ಸ್ಮರಿಸುತ್ತಾ ಅವನಲ್ಲಿ ಹುದುಗಿದ್ದ ವೈಚಾರಿಕತೆಯನ್ನು ನಾವು ಅಳವಡಿಸಿಕೊಂಡು ನಿತ್ಯ ನೂತನ ವಿಶ್ವವನ್ನು ಅರ್ಥೈಯಿಸಿಕೊಳ್ಳಲು ಪ್ರಯತ್ನಿಸೋಣ.


ದೂರದರ್ಶಕದ ಮೂಲಕ ವಿಶ್ವದ ಅಂತರಂಗವನ್ನೇ ಪರಿಚಯಿಸಿದ ವಿಜ್ಞಾನಿ ಗೆಲಿಲಿಯೋ. ದೂರದರ್ಶಕಗಳು ನೀಡುತ್ತಿರುವ ಕಾಣಿಕೆಗಳು ಮಾತ್ರ ನಿತ್ಯ ನೂತನ. ಅಸಂಖ್ಯ ನಕ್ಷತ್ರಗಳು ಹರಡಿ ಹೋಗಿರುವ ರಾತ್ರಿಯ ಆಕಾಶದ ಪರಮ ಸೌಂದರ್ಯವನ್ನು ನೋಡಲೇಬೇಕು. ವಿಶ್ವ ಕುರಿತ ಆನಂದವನ್ನು ಅನುಭವಿಸಬೇಕು. ಖಗೋಳ ವಿಜ್ಞಾನದ ಅಭಿವೃದ್ಧಿಯ ಬಗ್ಗೆ ಚರ್ಚಿಸಬೇಕು. ನಮ್ಮ ಭೂಮಿಯ ಕುರಿತಾಗಿಯೂ ಚಿಂತಿಸಬೇಕು. ಆಧುನಿಕ ಖಗೋಳ ವಿಜ್ಞಾನ ಪ್ರಾರಂಭವಾದದ್ದು 400 ವರ್ಷಗಳ ಹಿಂದೆ. ತನ್ನ ಸಿದ್ಧಾಂತಗಳಿಂದ, ಉಪನ್ಯಾಸಗಳಿಂದ ರೂಢಿಮೂಲ ಪರಿಕಲ್ಪನೆಗಳನ್ನು ಬುಡಮೇಲು ಮಾಡುತ್ತಿದ್ದ ಜಗಳಗಂಟ ಎಂದೇ ಗೆಲಿಲಿಯೋ ಪ್ರಖ್ಯಾತನಾದ. ಇಟಲಿಯ ಈ ಭೌತ ಮತ್ತು ಗಣಿತಜ್ಞ 1610ರಲ್ಲಿದೂರದರ್ಶಕ 'ವನ್ನುಜಗತ್ತಿಗೆ ಪರಿಚಯಿಸಿದ ನಂತರ, ವಿಶ್ವದ ಕತೆ ರೋಚಕವಾಗತೊಡಗಿತು. ಆಗ ಗೆಲಿಲಿಯೋನ ಮುಂದೆ ಕಂಡದ್ದು ಅದ್ಭುತಲೋಕ. ಅದುವೇ ವಿಶ್ವದ ಕುರಿತಾದ ನವದೃಷ್ಟಿ.

ಇಡೀ ವಿಶ್ವದ ಕೇಂದ್ರ ಭೂಮಿ ಮತ್ತುಭೂಮಿಯ ನಿಯಂತ್ರಣಕ್ಕೆ ಒಳಪಟ್ಟೇ ಎಲ್ಲವೂ ನಡೆಯುತ್ತಿದೆ ಎಂದು ಭಾವಿಸಿದ ಕಾಲ ಇತ್ತು. ಆ ಕಾಲದಲ್ಲಿ ರಂಗ ಪ್ರವೇಶಿಸಿದವರು ಇಟಲಿಯ ಖಗೋಳ ತಜ್ಞ ಗೆಲಿಲಿಯೋ ಗೆಲಿಲಿ. ಭೌತ ಮತ್ತು ಖಗೋಳ ವಿಜ್ಞಾನದಲ್ಲಿ ತನ್ನನ್ನು ತಾನು ತೊಡಗಿಸಿಕೊಂಡು ಪ್ರಾಯೋಗಿಕತೆಯನ್ನು ತುಂಬಾ ಸಮರ್ಥವಾಗಿ ನಿಭಾಯಿಸಿದವರಲ್ಲಿ ಗೆಲಿಲಿಯೋ ಮೊದಲಿಗ. ಮನೆಯವರ ಬಲವಂತಕ್ಕೆ ವೈದ್ಯಸಾಸ್ತ್ರ ಕಲಿಯುತ್ತಿದ್ದ ಗೆಲಿಲಿಯೋ ಖಗೋಳ ಮತ್ತು ಗಣಿತ ಉಪನ್ಯಾಸದಿಂದ ಪ್ರಭಾವಿತನಾಗಿ ವೈದ್ಯಶಾಸ್ತ್ರವನ್ನು



ಬಿಟ್ಟು ಖಗೋಳ ವಿಜ್ಞಾನವನ್ನು ಅಧ್ಯಯನ ಮಾಡಲು ಪ್ರಾರಂಭಿಸಿದರು. ಇಟಲಿಯ ಪಡುವಾ ವಿ.ವಿ.ಯಲ್ಲಿ ಗಣಿತ ಪ್ರಾಧ್ಯಾಪಕನಾಗಿ ಸೇರಿದ. ತನಗೆ ತೋಚಿದ, ಸತ್ಯ ಎಂದು ಅನಿಸಿದ್ದನ್ನು ಯಾವುದೇ ಮುಲಾಜಿಲ್ಲದೇ ಹೇಳುವಧೈರ್ಯ ಗೆಲಿಲಿಯೋ ಅವರಿಗಿತ್ತು. ಕನ್ನಡಕ ಅಂಗಡಿಯ ಕುಶಲಕರ್ಮಿ "ಲಿಪ್ಪಾರ್ಷಿಯೇ" ತಯಾರಿಸುತ್ತಿದ್ದ ಮಸೂರಗಳನ್ನು ಬಳಸಿ ಹೊಸದೊಂದು ಉಪಕರಣವನ್ನು ನಿರ್ಮಿಸಿದ್ದಾನೆ ಎಂಬ ವಿಷಯ ಕೇಳಿ ಗೆಲಿಲಿಯೋ ತಡಮಾಡದೇ ತಾನೂ ಒಂದು ಸರಳ ದೂರದರ್ಶಕವನ್ನು ತಯಾರಿಸಿ, ಸ್ವಯಂ ಕುಶಲಕರ್ಮಿ ಆದನು. ಗೆಲಿಲಿಯೋ ತಯಾರಿಸಿದ ದೂರದರ್ಶಕವು ಎಷ್ಟು ಅದ್ಭುತವಾಗಿತ್ತು ಎಂದರೆ, ಸ್ವಾಭಾವಿಕ ದೃಷ್ಟಿಗೂ ಗೋಚರಿಸದ ವಸ್ತು 50 ಪಟ್ಟು ಸಮೀಪ ಕಾಣಿಸುತ್ತಿತ್ತು.

ಗೆಲಿಲಿಯೋಗೆ ಖಗೋಳ ವೀಕ್ಷಣೆ ಅತ್ಯಂತ ಪ್ರೀತಿಯ ಹವ್ಯಾಸವಾಗಿತ್ತು. ತಾನು ತಯಾರಿಸಿದ ದೂರದರ್ಶಕವನ್ನು ಆಕಾಶದ ಕಡೆ ಗುರಿ ಇಟ್ಟು ಗುರುಗ್ರಹ ಮತ್ತು ಅದರ ನಾಲ್ಕು ಉಪಗ್ರಹಗಳನ್ನು ನೋಡಿ ಖುಷಿಪಟ್ಟ. ಅವನ ಮುಂದೆ ಹೊಸ ಲೋಕವೇ ತೆರೆದುಕೊಂಡಿತು. ಒಂದು ದಿನ ಗೆಲಿಲಿಯೋ ತನ್ನ ದೂರದರ್ಶಕದ ಮೂಲಕ ಗುರುಗ್ರಹವನ್ನು ತುಂಬಾ ಕುತೂಹಲದಿಂದ ವೀಕ್ಷಿಸಿದಾಗ ಆಶ್ಚರ್ಯವೇ ಕಾದಿತ್ತು.ಅದರಲ್ಲಿ ಕಂಡದ್ದು, ಗುರುಗ್ರಹದ ಎಡ



ಬಲಗಳಲ್ಲಿ ನಾಲ್ಕು ಚುಕ್ಕಿಯಂತಹ ನೈಸರ್ಗಿಕ ಉಪಗ್ರಹಗಳನ್ನು ವೀಕ್ಷಿಸಿದ.ಈ ಉಪಗ್ರಹಗಳನ್ನು ಇಂದಿಗೂ "ಗೆಲಿಲಿಯನ್ ಉಪಗ್ರಹಗಳು" (ಉಇಐಐಐಚಂಓ ಖಂಖಿಇಐಐಐಖಿಇಖ) ಎಂತಲೇ ಕರೆಯುತ್ತಾರೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಪ್ರಬಲ ದೂರದರ್ಶಕಗಳು ಬಂದವು. ಇನ್ನಷ್ಟು ಹೊಸ ಹೊಸ ಆಕಾಶಕಾಯಗಳು ಪತ್ತೆಯಾದವು. ವಿಶ್ವದ ಎಲ್ಲೆ ಇದೀಗ ತುಂಬಾ ವಿಸ್ತಾರಗೊಂಡಿತು ಗೆಲಿಲಿಯೋನ ಮೂಲಕ.

ದೂರದರ್ಶಕ ಆವಿಷ್ಕಾರವಾದ ನಂತರ ಅನೇಕ ವಿದ್ವಾಂಸರುಗೆಲಿಲಿಯೋನಬಿಟ್ಟುದೂರವೇಉಳಿದರು. 1632 ರಲ್ಲಿ ಗೆಲಿಲಿಯೋ ಪ್ರಕಟಿಸಿದ ವಿಶ್ವದ ಬಗೆಗಿನ ಎರಡು ಪ್ರಮುಖ ಸಿದ್ಧಾಂತಗಳನ್ನು ಕುರಿತ ಸಂವಾದ ಆಸ್ತಿಕ ವರ್ಗದಲ್ಲಿ ಅಭೂತಪೂರ್ವ ಕೋಲಾಹಲ ಹುಟ್ಟಿಸಿತು. ಬೌದ್ಧಿಕ ವಲಯ ಈ ಸಿದ್ಧಾಂತಗಳನ್ನು ಬಹಿಷ್ಕರಿಸಿತು. ಅದೇನೆಂದರೆ, "ಭೂಮಿ ಸುತ್ತುತ್ತಿದೆ, ಚಲನೆಯಲ್ಲಿದೆ,ತಿರುಗುತ್ತಿದೆ ಎಂದು ಯುರೋಪ್ ಖಂಡದಾದ್ಯಂತ ಪ್ರಚಾರ ಮಾಡಿದ್ದು" ಇದು ಆಗಿನ ಕಾಲದ ಸಂಪ್ರದಾಯವಾದಿಗಳಿಗೆ ಹಿಡಿಸಲಿಲ್ಲ. ಗೆಲಿಲಿಯೋನನ್ನು ವಿಚಾರಣೆಗೆ ಒಳಪಡಿಸಿದರು. ಆದರೆ ಗೆಲಿಲಿಯೋ ಅಷ್ಟೊತ್ತಿಗೆ ತನ್ನ ಬಾಲ ಸಂಜೆಯಲ್ಲಿದ್ದ. ವಿಚಾರಣೆಗೆ ಬಂದ ಅಧಿಕಾರಿಗಳ ಮನ ಒಲಿಸಲು ಸಾಧ್ಯವಾಗಲಿಲ್ಲ. ದೈಹಿಕವಾಗಿ ತುಂಬಾ ಬಳಲಿದ್ದ ಗೆಲಿಲಿಯೋ ಒಲ್ಲದ ಮನಸ್ಸಿನಿಂದ, ತಾನು ಇದುವರೆಗೆ ಪ್ರಚಾರ ಮಾಡಿದ್ದು ತಪ್ಪು ಎಂದುಸಂಪ್ರದಾಯವಾದಿಗಳ ಬಲವಂತಕ್ಕೆ ಒಪ್ಪಿಕೊಂಡು ಭೂಮಿ ಚಲಿಸುತ್ತಿಲ್ಲ ಎಂದು ಹೇಳಿದ. ಆದರೆ ಭೂಮಿ ಗೆಲಿಲಿಯೋನ ಮಾತು ಕೇಳುತ್ತದೆಯೇ... ಅದು ತನ್ನ ಪಾಡಿಗೆ ತಾನು ಇಂದಿಗೂ ಸುತ್ತುತ್ತಲೇಇದೆ. ಚಲಿಸುತ್ತಲೇ ಇದೆ. ಅಂದರೆ ಭೂಮಿ ಸೂರ್ಯನ ಸುತ್ತ ಚಲಿಸುತ್ತಿರುವುದರಿಂದಲೇ ಇಂದಿಗೂ ನಾವು ಹಗಲು-ರಾತ್ರಿಗಳನ್ನು ಕಾಣುತ್ತಿದ್ದೇವೆ. ಕೊನೆಗೆ ಗೆಲಿಲಿಯೋಗೆ ಗೃಹಬಂಧನ ವಿಧಿಸಲಾಯಿತು. ತನ್ನ ಜೀವಿತದ ಕೊನೆಯ ಅವಧಿಯನ್ನು ಸೇರೆಮನೆಯಲ್ಲಿಯೇ ಕಳೆದ ಗೆಲಿಲಿಯೋ ಬಿಟ್ಟು ಹೋದದ್ದು ಪ್ರಖರ ವೈಚಾರಿಕ ಮನೋಭಾವವನ್ನು ಮತ್ತು ಆಕಾಶದ ಸೌಂದರ್ಯವನ್ನು ತುಂಬಾ ಹತ್ತಿರದಿಂದ ನೋಡಬಲ್ಲ ದೂರದರ್ಷಕವನ್ನುಮಾತ್ರ. ಅಂದು ಗೆಲಿಲಿಯೋ ಬುನಾದಿ ಹಾಕಿದ ದೂರದರ್ಶಕ ಇಂದು ಇಡೀ ಖಗೋಳವನ್ನೇ ತುಂಬಾ ಸಮೀಪದಿಂದ ನೋಡಬಲ್ಲ ಹೆಚ್ಚು ಸಾಮರ್ಥ್ಯ ಹೊಂದಿರುವ ಬೃಹತ್ ದೂರದರ್ಶಗಳನ್ನು ನಾವೂ ಸಹಾ ತಯಾರಿಸುತ್ತಿರುವುದಕ್ಕೆ ಸಾಕ್ಷಿ. ಹಾಟ್ಸ್ ಅಪ್ ಗೆಲಿಲಿಯೋ.


# ಹೆಗ್ಗೆರೆ ಈಶ್ವರಗೆ ವಿಶೇಷ ಪೂಜೆ ಸಲ್ಲಿಸಿದ ನಾಗಸಾಧು

» **ಹೊಸದುರ್ಗ**

ತಾಲ್ಲೂಕಿನ ಹೆಗ್ಗೆರೆ ಗ್ರಾಮದ ಸ್ಮಶಾನದ ಪಕ್ಕದಲ್ಲಿ ನೆಲೆಸಿರುವ ಈಶ್ವರ (ಗಣಗೇಶ್ವರ) ದೇವರಿಗೆ ನಾಗಸಾಧು ಭೈರವ ಅಘೋರಿಗಳು ವಿಶೇಷ ಪೂಜೆ ಸಲ್ಲಿಸಿದರು. ಸಾವಿರಾರು ಭಕ್ತರು ದೇವರ ದರ್ಶನ ಪಡೆದು ನಾಗ ಸಾಧುಗಳೊಂದಿಗೆ ಮಾತನಾಡಿದರು.

ಪ್ರಯಾಗ್ ರಾಜ್ ನಲ್ಲಿ ನಡೆಯುತ್ತಿರುವ ಕುಂಭಮೇಳದಲ್ಲಿ ನಾಗಸಾಧು ಭೈರವ ಅಗೋರಿಯವರು ಸಂದರ್ಶನವೊಂದರಲ್ಲಿ ಹೆಗ್ಗೆರೆ ಈಶ್ವರ ದೇವರಿಗೆ ಪೂಜೆ ಮಾಡುವುದಾಗಿ ತಿಳಿಸಿದ್ದರು. ಈ ಹೇಳಿಕೆ ಸಾಮಾಜಿಕ ಮಾಧ್ಯಮಗಳಲ್ಲಿ ವ್ಯಾಪಕ ಪ್ರಚಾರ ಪಡೆದಿತ್ತು.

ನಾಗಸಾಧು ಭೈರವ ಅಘೋರಿಯವರು ವರ್ಷದಲ್ಲಿ ಎರಡು ಅಥವಾ ಮೂರು ಬಾರಿ ಯಾರೂಇಲ್ಲದಸಮಯದಲ್ಲಿ(ನಸುಕಿನಲ್ಲಿ)ಈ



ದೇವಾಲಯಕ್ಕೆ ಬಂದು ಪೂಜೆ ಸಲ್ಲಿಸುತ್ತಿದ್ದರು. ಇದನ್ನು ದೇವಾಲಯ ಪಕ್ಕದ ಜಮೀನಿನ ಒಬ್ಬ ಯುವಕ ಗಮನಿಸಿದ್ದ ಅವರು ಫೆ.19 ರಂದು ಪೂಜೆಗೆ ಆಗಮಿಸುವುದಾಗಿ ಯುವಕನಿಗೆ ತಿಳಿಸಿದ್ದರು. ಈ ಹಿನ್ನೆಲೆಯಲ್ಲಿ ಗ್ರಾಮಸ್ಥರೆಲ್ಲಾ ತಯಾರಿ ನಡೆಸಿ, ನಾಗ ಸಾಧುಗಳಿಗೆ ಅದ್ದೂರಿಯಾಗಿ ಸ್ವಾಗತ ಕೋರಿದರು. ಕುಂಭಮೇಳದ ಜೊತೆಯಲ್ಲಿ ಸಕಲ ವಾದ್ಯ ಗೋಷ್ಠಿಗಳ ಮೆರವಣಿಗೆಯೊಂದಿಗೆ ಅವರನ್ನು ಸ್ವಾಗತಿಸಲಾಯಿತು. ನಂತರ ಅವರು ಈಶ್ವರ ದೇವರಿಗೆ ವಿಶೇಷ ಪೂಜೆ ಸಲ್ಲಿಸಿದ್ದಾರೆ

ವಿಷಯ ತಿಳಿಯುತ್ತಿದ್ದಂತೆಯೇ ಸುತ್ತ ಮುತ್ತಲಿನ ಹೆಗ್ಗೆರೆ, ದಳವಾಯಿಕಟ್ಟೆ, ವೆಂಗಳಾಪುರ, ಓಬಳಾಪುರ, ಕಡವಿಗೆರೆ, ಶ್ರೀರಾಂಪುರ, ನೇರಲಕೆರೆ, ಯಳನಡು, ಹುಳಿಯಾರು ಜನರು ಭಾಗವಹಿಸಿದ್ದರು.

# ನೂತನ ರಸ್ತೆ ಕಾಮಗಾರಿಗೆ ಭೂಮಿಪೂಜೆ

» **ಹೊಳಲ್ಕೆರೆ**

ತಾಲ್ಲೂಕಿನಾದ್ಯಂತ ಎಲ್ಲಾ ಊರುಗಳಿಗೂ ಸಂಪರ್ಕ ಕಲ್ಪಿಸಲು ಉತ್ತಮ ಗುಣಮಟ್ಟದ ಕಾಂಕ್ರಿಟ್ ರಸ್ತೆಗಳ ನಿರ್ಮಾಣ ನಿರಂತರವಾಗಿ ನಡೆಯುತ್ತದೆಂದು ಶಾಸಕ ಡಾ.ಎಂ.ಚಂದ್ರಪ್ಪ ತಿಳಿಸಿದರು.ಸಿರಿಗೆರೆ ಹೋಬಳಿಯ ಸೀಗೆಹಳ್ಳಿ ಗ್ರಾಮದಲ್ಲಿ ಒಂದು ಕೋಟಿ 75 ಲಕ್ಷ ರೂ.ವೆಚ್ಚದಲ್ಲಿ ನೂತನ ಡಾಂಬರ್ ರಸ್ತೆ ಕಾಮಗಾರಿಗೆ ಶುಕ್ರವಾರ ಭೂಮಿಪೂಜೆ ಸಲ್ಲಿಸಿ ಮಾತನಾಡಿದರು.



ಅಳಗವಾಡಿ, ಹಳವುದರ, ಹಳೆ ರಂಗಾಪುರಕ್ಕೆ ಹೋಗುವ ರಸ್ತೆಯನ್ನು ಅಭಿವೃದ್ಧಿಪಡಿಸಿದ್ದೇನೆ. ಇಲ್ಲಿ ಶಾಲೆಯಿರಲಿಲ್ಲ ಎನ್ನುವುದನ್ನು ಗಮನಿಸಿ ಗುಣಮಟ್ಟದ ಕಟ್ಟಡ ಕಟ್ಟಿಸಿದ್ದೇನೆ. ಇದರಿಂದ ಬಡ ಮಕ್ಕಳ ಶಿಕ್ಷಣಕ್ಕೆ ಅನುಕೂಲವಾಗಿದೆ. ದೇವಸ್ಥಾನಕ್ಕೆ ಹಣ ಕೊಟ್ಟಿದ್ದೇನೆ. ಸಿ.ಸಿ.ರಸ್ತೆ, ಹೈಟೆಕ್ ಆಸ್ಪತ್ರೆ, ಕೆರೆ ಕಟ್ಟೆಗಳ ನಿರ್ಮಾಣ, ರೈತರ ತೋಟಗಳಿಗೆ ವಿದ್ಯುತ್ ಅಭಾವವಾಗಬಾರದೆಂದು ವಿದ್ಯುತ್ ಪವರ್ ಸ್ಟೇಷನ್ ನಿರ್ಮಾಣಕ್ಕೆ 250 ಕೋಟಿ ರೂ. ಮಂಜೂರಾಗಿದ್ದು, ಮೊದಲ ಹಂತವಾಗಿ 110 ಕೋಟಿ ರೂ.ಗಳನ್ನು ಬಿಡುಗಡೆಗೊಳಿಸಿದ್ದೇನೆ. ಇನ್ನು ಮೂರುವರೆ ನಾಲ್ಕು ವರ್ಷಗಳಲ್ಲಿ ತಾಲ್ಲೂಕಿನಾದ್ಯಂತ ಎಲ್ಲಾ ಕೆಲಸಗಳು ಪೂರ್ಣಗೊಳ್ಳುತ್ತದೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T